
ಜನರ ಮಡಿಲಲ್ಲಿ
ಸಾರ್ಥಕ 50 ವರುಷ
BSY
ಅಭಿಮಾನೋತ್ಸವ
ನಾಡು ಕಂಡ ಧೀಮಂತ ರೈತನಾಯಕರು,
ಹುಟ್ಟು ಹೋರಾಟಗಾರರು, ಜನ ನಾಯಕರಾದ
ಸನ್ಮಾನ್ಯ ಡಾ. ಬಿ.ಎಸ್. ಯಡಿಯೂರಪ್ಪನವರು
ರಾಜಕೀಯ ಜೀವನ ಆರಂಭಿಸಿ
50 ವರ್ಷಗಳಾದ ಈ ಸುಸಂದರ್ಭದಲ್ಲಿ
ಕೋಟೆನಾಡು ಚಿತ್ರದುರ್ಗದಲ್ಲಿ ನಡೆಯುತ್ತಿರುವ
ಬಿ.ಎಸ್.ವೈ. ಅಭಿಮಾನೋತ್ಸವ ಹಾಗೂ
ಪುರಪ್ರವೇಶದ ಭವ್ಯ ಮೆರವಣಿಗೆಗೆ ಬನ್ನಿ.....
ಪ್ರಕಟಣೆ
ಶ್ರೀ ಎಸ್. ಕೆ. ಬಸವರಾಜನ್
ಮಾಜಿ ಶಾಸಕರು, ಬಿಜೆಪಿ ನಾಯಕರು, ಚಿತ್ರದುರ್ಗ
ಶ್ರೀಮತಿ ಸೌಭಾಗ್ಯ ಬಸವರಾಜನ್
ಬಿಜೆಪಿ ಮುಖಂಡರು ಮತ್ತು ಮಾಜಿ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಚಿತ್ರದುರ್ಗ,
ಹಾಗೂ ಎಸ್.ಕೆ.ಬಿ. ಅಭಿಮಾನಿ ಬಳಗ, ಚಿತ್ರದುರ್ಗ
ಪುರಪ್ರವೇಶ : 08-05-2026ನೇ ಶುಕ್ರವಾರ ಸಂಜೆ 4 : 00 ಗಂಟೆಗೆ
ಸ್ಥಳ: ಕನಕ ಸರ್ಕಲ್, ಚಿತ್ರದುರ್ಗ
ಅಭಿಮಾನೋತ್ಸವ : 09-05-2026ನೇ ಶನಿವಾರ ಮಧ್ಯಾಹ್ನ 12.30 ಗಂಟೆಗೆ
ಸ್ಥಳ: ಮಾದಾರ ಚನ್ನಯ್ಯ ಗುರುಪೀಠದ ಪಕ್ಕದ ಮೈದಾನ, ಚಿತ್ರದುರ್ಗ


ಶ್ರೀ ರಾಜಣ್ಣ ನವರು
ಸಮಾಜಸೇವಕರು – ಹಿರಿಯೂರು ವಿಧಾನಸಭಾ ಕ್ಷೇತ್ರ,
ರಾಜ್ಯಾಧ್ಯಕ್ಷರು – ಕರ್ನಾಟಕ ರಾಜ್ಯ ಕಾಡುಗೊಲ್ಲರ ಸಂಘ (ರಿ.),
ನಿಕಟಪೂರ್ವ ಬಿಬಿಎಂಪಿ ಸದಸ್ಯರು ಜಿಲ್ಲಾ ಪಂಚಾಯತ್ ಸದಸ್ಯರು
ಜನರ ಮಡಿಲಲ್ಲಿ
ಸಾರ್ಥಕ 50 ವರುಷ
BSY
ಅಭಿಮಾನೋತ್ಸವ
ದಿನಾಂಕ:- 9-05-2026. ಸ್ಥಳ:- ಚಿತ್ರದುರ್ಗ

ಕನ್ನಡಪ್ರಭ
ಶುಕ್ರವಾರ 8.05.2026
ಶಿವಮೊಗ್ಗ

ಸುದ್ದಿ ಸಿಂಚನ

ಕೃಷಿ ಸಹಕಾರ ಸಂಘದ ಸಿಇಒಗೆ ಬೀಳ್ಕೊಡುಗೆ

ಹರಿಹರ; ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಯೋ ನಿವೃತ್ತಿಯಾದ ಇರ್ಫಾನುಲ್ಲಾ ಅವರಿಗೆ ಬೀಳ್ಕೊಡಲಾಯಿತು. ಹರಿಹರ ತಾಲೂಕು ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ, ಸುಮಾರು 21 ವರ್ಷ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯಾಗಿ ಸೇವೆ ಸಲ್ಲಿಸಿ, ಏ.30ರಂದು ವಯೋ ನಿವೃತ್ತರಾದ ಸೈಯದ್ ಇರ್ಫಾನುಲ್ಲಾ ಅವರಿಗೆ ಸಂಘದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಜಿ.ಬಿ ಹಾಲೇಶಗೌಡ್ರು ಮಾತನಾಡಿ, ನಿವೃತ್ತರಾದ ಸೈಯದ್ ಇರ್ಫಾನುಲ್ಲಾರವರ ಸೇವೆಯನ್ನು ಶ್ಲಾಘಿಸಿದರು. ನಿವೃತ್ತಿ ಜೀವನದಲ್ಲಿ ಭಗವಂತ ಅವರಿಗೆ ಆಯುಷ್ಯ-ಆರೋಗ್ಯ ನೀಡಲೆಂದು ಹಾರೈಸಿದರು. ಉಪಾಧ್ಯಕ್ಷ ಕೆ.ಜೈಮುನಿ, ಡಿಡಿಸಿಸಿ ಬ್ಯಾಂಕಿನ ಕ್ಷೇತ್ರಾಧಿಕಾರಿ ಶಿವಕುಮಾರ ಎಚ್.ಸಿ., ಸಿಬ್ಬಂದಿ ಹಾಜರಿದ್ದರು.

ಇಂದು ಚೌಡೇಶ್ವರಿ ದೇಗುಲ ಶಿಲಾಮಂದಿರ ಉದ್ಘಾಟನೆ

ಮಲೇಬೆನ್ನೂರು: ಸಮೀಪದ ಸಾಲಕಟ್ಟೆ ಗ್ರಾಮದಲ್ಲಿ ಮೇ 8ರಂದು ಹೊನ್ನಾಳಿ ಹಿರೇಕಲ್ಮಠದ ಒಡೆಯರ್‌ಡಾ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಧಿವ್ಯ ಸಾನಿಧ್ಯದಲ್ಲಿ ಚೌಡೇಶ್ವರಿ ದೇವಿ ದೇವಾಲಯದ ಶಿಲಾಮಂದಿರ ಉಧ್ಘಾಟನೆ, ನೂತನ ಗೋಪುರಕ್ಕೆ ಕಳಸಾರೋಹಣ, ಕರಿಗಲ್ಲು ಸ್ಥಾಪನೆ, ಧಾರ್ಮಿಕ ಸಮಾರಂಭ ನಡೆಯಲಿದೆ. ಬೆಳಿಗ್ಗೆ ಪೂಜಾ ವಿಧಿ ವಿದಾನಗಳು ಜರುಗಲಿವೆ.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕಾಲೇಜಿಗೆ ಮನವಿ

ದಾವಣಗೆರೆ: ದಾವಣಗೆರೆ ದಕ್ಷಿಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಬಿಡುಗಡೆ ಮಾಡಿರುವ ₹100 ಕೋಟಿ ಅನುದಾನದಲ್ಲಿ ಕ್ಷೇತ್ರದ ಸಾರ್ವಜನಿಕರಿಗೆ ಅತ್ಯಗತ್ಯವಾಗಿರುವ ಮೂಲಸೌಕರ್ಯಗಳನ್ನು ಕಲ್ಪಿಸಿಕೊಡುವಂತೆ ವಿಧಾನ ಪರಿಷತ್ ಸದಸ್ಯ ಕೆ.ಅಬ್ದುಲ್ ಜಬ್ಬಾರ್‌ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿ ವಿನಂತಿಸಿದ್ದಾರೆ. ದಾವಣಗೆರೆ ದಕ್ಷಿಣ ಭಾಗದಲ್ಲಿ ಸುಸಜ್ಜಿತ ಸೂಪರ್‌ಸ್ಪೆಷಾಲಿಟಿ ಆಸ್ಪತ್ರೆಯ ಕೊರತೆ ಎದ್ದುಕಾಣುತ್ತಿದೆ. ಬಡ ಮತ್ತು ಮಧ್ಯಮ ವರ್ಗದ ಜನರು ಚಿಕಿತ್ಸೆಗಾಗಿ ದೂರದ ಊರುಗಳಿಗೆ ಅಲೆಯುವಂತಾಗಿದೆ. ಜನರ ಆರೋಗ್ಯದ ಹಿತದೃಷ್ಟಿಯಿಂದ ಈ ಅನುದಾನದಲ್ಲಿ ಸುಸಜ್ಜಿತ ಸೂಪರ್‌ಸ್ಪೆಷಲಿಟಿ ಆಸ್ಪತ್ರೆ ನಿರ್ಮಿಸಬೇಕು ಎಂದು ಒತ್ತಾಯಿಸಿದ್ದಾರೆ. ಇತ್ತೀಚೆಗೆ ನಡೆದ ಉಪಚುನಾವಣೆಯಲ್ಲಿ ಜಯ ಸಾಧಿಸಿದ ಅಭ್ಯರ್ಥಿಗೆ ಹಾಗೂ ಈ ಯಶಸ್ಸಿಗೆ ಕಾರಣರಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಅವರಿಗೆ ಕೆ.ಅಬ್ದುಲ್ ಜಬ್ಬಾರ್ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ದಾವಣಗೆರೆಯಿಂದ ಅಭಿಮಾನೋತ್ಸವಕ್ಕೆ 1 ಲಕ್ಷ ಜನ

ರೇಣುಕಾಚಾರ್ಯ ಮಾಹಿತಿ | ಸ್ವಯಂ ಪ್ರೇರಿತರಾಗಿ ಅಭಿಮಾನಿಗಳು ಸಮಾವೇಶದಲ್ಲಿ ಭಾಗಿ | ಚಿತ್ರದುರ್ಗದಲ್ಲಿ ಅಂತಿಮ ಸಿದ್ಧತೆ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ 5 ದಶಕಗಳ ಸುದೀರ್ಘ ರಾಜಕಾರಣದ ಹಿನ್ನೆಲೆಯಲ್ಲಿ ಬಿಎಸ್‌ವೈ ಅಭಿಮಾನೋತ್ಸವವು ಮೇ 9ಕ್ಕೆ ಚಿತ್ರದುರ್ಗದಲ್ಲಿ ನಡೆಯಲಿದ್ದು, ನಾವೆಲ್ಲರೂಸೇರಿಕೊಂಡು ಐತಿಹಾಸಿಕ ಅಭಿಮಾನೋತ್ಸವ ಮಾಡುತ್ತಿದ್ದೇವೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪಕ್ಷ ಸಂಘಟನೆ, ರೈತ, ಜನಪರ ಹೋರಾಟ ಹೀಗೆ ಎಲ್ಲಾ ಹುದ್ದೆ, ಜವಾಬ್ದಾರಿಗಳನ್ನು ಯಡಿಯೂರಪ್ಪ ಯಶಸ್ವಿಯಾಗಿ ನಿರ್ವಹಿಸಿದ್ದು, ಇಂತಹ ಹಿರಿಯ ನಾಯಕನ ಮೇಲಿನ ಅಭಿಮಾನೋತ್ಸವವನ್ನು ನಾವೆಲ್ಲರೂ ಒಟ್ಟಾಗಿ ಮಾಡುತ್ತಿದ್ದೇವೆ ಎಂದರು.

ರಾಜಕೀಯ ಚಾಣಕ್ಯ ಅಂತ ವಿರೋಧಿಗಳಿಂದಲೇ ಬಣ್ಣಿಸಲ್ಪಡುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ರಾಜ್ಯ, ರಾಷ್ಟ್ರೀಯ ನಾಯಕರೂ ಭಾಗವಹಿಸುವರು. ವಿಧಾನಸಭೆ ವಿಪಕ್ಷ ನಾಯಕರು, ಹಾಲಿ-ಮಾಜಿಶಾಸಕರು, ಮಾಜಿಮುಖ್ಯಮಂತ್ರಿಗಳು, ಮಾಜಿ ಸಚಿವರು ಸೇರಿದಂತೆ ಪಕ್ಷದ ಹಿರಿಯ, ಕಿರಿಯ ನಾಯಕರು ಭಾಗವಹಿಸುವರು. ನಾವೆಲ್ಲಾ ಒಂದಾಗಿ, ಸ್ವಯಂ ಪ್ರೇರಿತರಾಗಿ ಸಮಾವೇಶ ಮಾಡುತ್ತಿದ್ದು, ಎಲ್ಲರೂಹೆಚ್ಚಿನಸಂಖ್ಯೆಯಲ್ಲಿಪಾಲ್ಗೊಳ್ಳಬೇಕುಎಂದು ಮನವಿ ಮಾಡಿದರು.

ಇಡೀ ದಕ್ಷಿಣ ಭಾರತದಲ್ಲೇ ಮೊದಲ ಸಲ ಬಿಜೆಪಿ ಖಾತೆ ತೆರೆಯಲು ಕಾರಣವಾಗಿದ್ದೇ ಯಡಿಯೂರಪ್ಪ. ಬಿಎಸ್‌ವೈ ಅಭಿಮಾನೋತ್ಸವಕ್ಕೆ ದಾವಣಗೆರೆ ಜಿಲ್ಲೆಯಿಂದಕನಿಷ್ಠ1 ಲಕ್ಷ ಜನರು ಪಾಲ್ಗೊಳ್ಳುತ್ತಿದ್ದಾರೆ.



ದಾವಣಗೆರೆಯಲ್ಲಿ ಬಿಜೆಪಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ವಿಪ ಮಾಜಿ ಮುಖ್ಯ ಸಚೇತಕ ಡಾ.ಎ.ಎಚ್. ಶಿವಯೋಗಿಸ್ವಾಮಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಇಂತಹ ನಾಯಕರ ಅಭಿಮಾನೋತ್ಸವಕ್ಕೆ ಜನರೂ ಸಹ ಸ್ವಯಂ ಪ್ರೇರಣೆಯಿಂದ ಭಾಗವಹಿಸಲಿದ್ದಾರೆ. ಈಗಾಗಲೇ ಚಿತ್ರದುರ್ಗದಲ್ಲಿ ಅಂತಿಮ ಸಿದ್ಧತೆಗಳು ನಡೆದಿದ್ದು, ಸಮಾವೇಶಕ್ಕೆ ಕ್ಷಣಗಣನೆ ಶುರುವಾಗಿದೆ ಎಂದು ಹೇಳಿದರು.

ವಿಪ ಮಾಜಿ ಮುಖ್ಯ ಸಚೇತಕ ಡಾ.ಎ.ಎಚ್. ಶಿವಯೋಗಿಸ್ವಾಮಿ, ದಾವಣಗೆರೆ ನಗರ ಪಾಲಿಕೆ ಮಾಡಿ, ಅಭಿವೃದ್ಧಿಗೆ ಆರಂಭದಲ್ಲೇ 100 ಕೋಟಿ ರು. ಸಿಎಂ ವಿಶೇಷಾನುದಾನ ನೀಡಿ, ಊರಿನ ಅಭಿವೃದ್ಧಿ ಸ್ಪಂದಿಸಿದ್ದು ಯಡಿಯೂರಪ್ಪ. ಇಲ್ಲಿನ ಕಾಯಿಪೇಟೆ ಶ್ರೀ ಬಸವೇಶ್ವರ ದೇವಸ್ಥಾನ ಎದುರು ಅಶ್ವಾರೂಢ ಶ್ರೀ ಬಸವೇಶ್ವರ ಪುತ್ಥಳಿ, ದೇವಸ್ಥಾನ ಜೀರ್ಣೋದ್ಧಾರಕ್ಕೆ 1 ಕೋಟಿ, ಹಳೆಪೇಟೆ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ 1 ಕೋಟಿ ಅನುದಾನ ನೀಡಿದ್ದು ಯಡಿಯೂರಪ್ಪ. 5 ದಶಕದ ಬಿಎಸ್‌ವೈ ಸಾರ್ವಜನಿಕ ಸೇವೆ ಗೌರವಿಸಲು ಚಿತ್ರದುರ್ಗದಲ್ಲಿ ಅಭಿಮಾನೋತ್ಸವ ಹಮ್ಮಿಕೊಳ್ಳಲಾಗಿದೆ ಎಂದರು.

ಮಾಜಿ ಶಾಸಕರಾದ ಎಸ್.ವಿ.ರಾಮಚಂದ್ರ, ಎಂ.ಬಸವರಾಜ ನಾಯ್ಕ, ಮಾಜಿ ಮೇಯರ್‌ಬಿ.ಜಿ.ಅಜಯಕುಮಾರ, ರಾಜ್ಯ ರೈತ ಮೋರ್ಚಾದ ಉಪಾಧ್ಯಕ್ಷ ಲೋಕಿಕೆರೆ ನಾಗರಾಜ, ರುದ್ರೇಗೌಡ, ಆರನೇಕಲ್ಲು ವಿಜಯಕುಮಾರ, ಜರೀಕಟ್ಟೆ ಹನುಮಂತಪ್ಪ, ಸಂತೋಷ ಪೈಲ್ವಾನ, ಮಂಜುನಾಥ ಪೈಲ್ವಾನ, ಮಂಜುನಾಥ ಬೆಳ್ಳೂಡಿ, ವಿಶ್ವನಾಥ, ಗಜ ಸಂತು, ರಾಜು ವೀರಣ್ಣ, ಪ್ರವೀಣ ಜಾಧವ್, ಪಂಜು ಇತರರು ಇದ್ದರು.

2028ಕ್ಕೆ ಕಾಂಗ್ರೆಸ್ ಮುಕ್ತ ದಾವಣಗೆರೆ ಜಿಲ್ಲೆ

ಆಡಳಿತ ಯಂತ್ರದ ದುರುಪಯೋಗ ಮತ್ತು ಹಣದ ಪ್ರಭಾವದಿಂದ ದಾವಣಗೆರೆ ದಕ್ಷಿಣ, ಬಾಗಲಕೋಟೆ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆದ್ದಿದ್ದರೂ, ದಾವಣಗೆರೆ ಜಿಲ್ಲೆಯು 2028ರ ಸಾರ್ವತ್ರಿಕ ಚುನಾವಣೆಯಲ್ಲಿ ಸಂಪೂರ್ಣವಾಗಿ ಕಾಂಗ್ರೆಸ್ ಮುಕ್ತವಾಗಲಿದೆ ಎಂದು ಬಿಜೆಪಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಭವಿಷ್ಯ ನುಡಿದರು. ದಾವಣಗೆರೆ ಜಿಲ್ಲೆಯಲ್ಲಿ ಬಿಜೆಪಿ ಪಕ್ಷ ಸಂಘಟನೆ ಅತ್ಯಂತ ಶಕ್ತಿಶಾಲಿಯಾಗಿದ್ದು, ಬೂತ್ ಮಟ್ಟದ ಕಾರ್ಯಕರ್ತರ ಸತತ ಪರಿಶ್ರಮ, ಪ್ರಯತ್ನದಿಂದಾಗಿ ಹೆಚ್ಚಿನ ಮತಗಳು ಲಭಿಸಿದ್ದು, ಕಾಂಗ್ರೆಸ್ ಪಕ್ಷ ಆಡಳಿತ ಯಂತ್ರದ ದುರುಪಯೋಗ, ಹಣದ ಹೊಳೆ ಹರಿಸದಿದ್ದರೆ ದಾವಣಗೆರೆ ದಕ್ಷಿಣದಲ್ಲಿ ಬಿಜೆಪಿ ಗೆಲ್ಲುವುದು ಶತಃಸಿದ್ಧವಾಗಿತ್ತು ಎಂದರು. ಪಶ್ಚಿಮ ಬಂಗಾಳ, ಅಸ್ಸಾಂ, ತಮಿಳುನಾಡಿನಂತಹ ರಾಜ್ಯಗಳಲ್ಲಿ ಕಾಂಗ್ರೆಸ್ ಪಕ್ಷ ಧೂಳೀಪಟವಾಗಿದೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ನಾಯಕತ್ವದಲ್ಲಿ ದೇಶವು ಕಾಂಗ್ರೆಸ್ ಮುಕ್ತವಾಗುತ್ತಿದೆ. ಮೋದಿ ವರ್ಚಸ್ಸಿನ ಮುಂದೆ ಕಾಂಗ್ರೆಸ್ ನಾಯಕರ ವೈಫಲ್ಯ ಎದ್ದು ಕಾಣುತ್ತಿದೆ. ದಾವಣಗೆರೆ ಜಿಲ್ಲೆಯಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಇದೇ ಸ್ಥಿತಿ ಬರುವ ದಿನಗಳು ದೂರವಿಲ್ಲ ಎಂದರು.

ಬಿಜೆಪಿಯಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ

ದಾವಣಗೆರೆ ಜಿಲ್ಲಾ ಬಿಜೆಪಿಯಲ್ಲಿ ಯಾವುದೇ ಗೊಂದಲ, ಭಿನ್ನಾಭಿಪ್ರಾಯಗಳೂ ಇಲ್ಲ. ನಾವೆಲ್ಲರೂ ಒಟ್ಟಾಗಿಯೇ ಇದ್ದೇವೆ, ಒಗ್ಗಟ್ಟಾಗಿಯೇ ಕೆಲಸ ಮಾಡುತ್ತಿದ್ದೇವೆ ಎಂದು ರೇಣುಕಾಚಾರ್ಯ ಸ್ಪಷ್ಟಪಡಿಸಿದರು. ತಮ್ಮ ಪಕ್ಷದ ಆಂತರಿಕ ಬೆಳವಣಿಗೆಗಳೆಂದು ಹರಡಿರುವ ವದಂತಿಗಳಿಗೆ ಕಿವಿಗೊಡಬೇಕಾಗಿಲ್ಲ. ಸಂಘಟನೆ ನಮಗೆ ತಾಯಿ ಸಮಾನವಾಗಿದ್ದು, ದಕ್ಷಿಣ ಉಪಚುನಾವಣೆಯಲ್ಲೂ ನಾವೆಲ್ಲರೂ ಒಟ್ಟಾಗಿ, ಒಗ್ಗಟ್ಟಿನಿಂದಲೇ ಪಕ್ಷದ ಗೆಲುವಿಗೆ ಶ್ರಮಿಸಿದ್ದೇವೆ ಎಂದರು. ದಾವಣಗೆರೆ ಜಿಲ್ಲೆಯಿಂದ ಸುಮಾರು 1 ಸಾವಿರ ಬಸ್ಸುಗಳು, ಹತ್ತಾರು ಸಾವಿರ ಕಾರುಗಳು, ಟಿಟಿ ವಾಹನಗಳ ವ್ಯವಸ್ಥೆ ಮಾಡಲಾಗಿದೆ. ಜಿಲ್ಲಾಧ್ಯಕ್ಷರು, ಪಕ್ಷದ ಮುಖಂಡರು ಈಗಾಗಲೇ ಮಠಾಧೀಶರನ್ನು ಭೇಟಿ ಮಾಡಿ, ಅಭಿಮಾನೋತ್ಸವಕ್ಕೆ ಆಹ್ವಾನಿಸುತ್ತಿದ್ದಾರೆ. ಯಡಿಯೂರಪ್ಪ ಮೇಲೆ ಅಭಿಮಾನ ಇರುವವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶವಿದೆ. ಅದನ್ನು ಭಿನ್ನಮತವೆಂದು ವ್ಯಾಖ್ಯಾನಿಸುವುದು ಸರಿಯಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಅಭಿಮಾನೋತ್ಸವಕ್ಕೆ ಚನ್ನಗಿರಿಯಿಂದ 30000 ಜನ

ಮಾಡಾಳು ಮಾಹಿತಿ | 75 ಸಾವಿರ ಮಂದಿಗೆ ಊಟದ ವ್ಯವಸ್ಥೆ | ಆರೋಗ್ಯ ತಪಾಸಣಾ ಕೇಂದ್ರ

• **ಕನ್ನಡಪ್ರಭ ವಾರ್ತೆ** ಚನ್ನಗಿರಿ

ಮೇ9ರಂದುಚಿತ್ರದುರ್ಗದಲ್ಲಿನಡೆಯಲಿರುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ರಾಜ್ಯದ ಮೂಲೆ, ಮೂಲೆಯಿಂದ ಪಕ್ಷಾತೀತವಾಗಿಲಕ್ಷಾಂತರಜನರುಬರುವ ನಿರೀಕ್ಷೆ ಇದ್ದು ಚನ್ನಗಿರಿ ವಿಧಾನಸಭಾ ಕ್ಷೇತ್ರದಿಂದ 30 ಸಾವಿರಕ್ಕೂ ಅಧಿಕ ಸಂಖ್ಯೆಯ ಕಾರ್ಯಕರ್ತರು, ಅಭಿಮಾನಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಎಂದುರಾಜ್ಯ ಬಿಜೆಪಿ ಪರಿಷತ್ ಸದಸ್ಯ ಮಾಡಾಳು ಮಲ್ಲಿಕಾರ್ಜುನ್ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಕಾರ್ಯಕ್ರಮಕ್ಕೆ ಬರುವ ಜನರಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಊಟದ ವ್ಯವಸ್ಥೆಯನ್ನು ಮಾಡಿದ್ದು ಒಂದು ಪಂಥಿಯಲ್ಲಿ 50ರಿಂದ 75 ಸಾವಿರ ಜನರು ಕುಳಿತು ಊಟ ಮಾಡುವ ವ್ಯವಸ್ಥೆ ಮಾಡಲಾಗಿದೆ. ಬೆಸಿಲಿನ ತಾಪ ಹೆಚ್ಚಾಗಿರುವಕಾರಣಜನರಿಗೆಕುಡಿಯುವ ನೀರು, ತಂಪು ಪಾನಿಯಗಳು ಸೇರಿದಂತೆ ಆರೋಗ್ಯ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು ಈ ಇಂತಹ ಬೃಹತ್ ಕಾರ್ಯಕ್ರಮದಲ್ಲಿ ಲಕ್ಷಾಂತರ ಜನರು ಭಾಗವಹಿಸುವುದರಿಂದ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮಾಡಲು ವ್ಯವಸ್ಥಿತ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದರು.

ಕಾರ್ಯಕ್ರಮ ನಡೆಯುವ ಸ್ಥಳದ ನಾಲ್ಕು ಕಡೆಗಳಲ್ಲಿಯೂ ಪ್ರವೇಶ ಮತ್ತು ನಿರ್ಗಮನ ದ್ವಾರವನ್ನು ಮಾಡಲಾಗಿದೆ ಎಂದರು. ಈಕಾರ್ಯಕ್ರಮಕ್ಕೆದಾವಣಗೆರೆ ಜಿಲ್ಲೆಯಿಂದ1 ಲಕ್ಷಜನರುಭಾಗವಹಿಸುವ ನಿರೀಕ್ಷೆ ಇದ್ದು ಚನ್ನಗಿರಿ ಕ್ಷೇತ್ರದಿಂದ 200 ಬಸ್, 700 ಕಾರುಗಳಲ್ಲಿ ಜನರು ಹೋಗಲಿದ್ದಾರೆ ಎಂದರು.

ನಾಡಿನ ವಿವಿಧ ಮಠಗಳ 1500ಸ್ವಾಮಿಜಿಗಳು ಭಾಗವಹಿಸ ಲಿದ್ದು ಕೇಂದ್ರ ಗೃಹಸಚಿವ ಅಮಿತ್ ಶಾ ಉದ್ಘಾಟನೆ ಮಾಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳುವಕ್ಷೇತ್ರದ ಜನತೆ ಆಯಾ ಗ್ರಾಮಗಳಲ್ಲಿ ಬರುವ ಬಸ್‌ಗಳಲ್ಲಿ ಆ ದಿನ ಬೆಳಿಗ್ಗೆ 10 ಗಂಟೆಗೆಹೊರಡಬೇಕುಎಂದುತಿಳಿಸಿದರು. ಬಿಜೆಪಿಪಕ್ಷದಮುಖಂಡರಾದದಿಗ್ಗೇನಹಳ್ಳಿ ನಾಗರಾಜ್, ಲಕ್ಷ್ಮಣ್ ನಾಯ್ಕ್, ಅಣ್ಣಯ್ಯ, ಸುಧಾಕರ್‌ಹಾಜರಿದ್ದರು.



9,10ಕ್ಕೆ ಪಾರಂಪರಿಕ ಬೀಜೋತ್ಸವ

ದಾವಣಗೆರೆ: 'ಬೀಜವೇ ಜೀವನ' ಎಂಬ ಧ್ಯೇಯವಾಕ್ಯದೊಂದಿಗೆ, ಐಕಾಂತಿಕ ಸಮುದಾಯದ ವತಿಯಿಂದ ಪಾರಂಪರಿಕ ಬೀಜೋತ್ಸವ ಕಾರ್ಯಕ್ರಮವನ್ನು ಮೇ 9 ಮತ್ತು 10ರಂದು ಎರಡು ದಿನಗಳ ಕಾಲ ಇಲ್ಲಿನ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆಯೋಜಕ, ಸಹಜ ಕೃಷಿಕ ರಾಘವ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಯುಎನ್‌ಡಿಪಿ ಇಕ್ವೇಟರ್‌ಪ್ರಶಸ್ತಿ 2025 ಲಭಿಸಿದ ಬೀಜಮಾತೆ ಧಾರವಾಡದ ಬೀಬಿ ಜಾನ್ ಪಾರಂಪರಿಕ ಬೀಜೋತ್ಸವವನ್ನು ಉದ್ಘಾಟಿಸಲಿದ್ದಾರೆ. ಸಿರಸಿಯ ಕೃಷಿ ಮತ್ತು ಪರಿಸರ ಬರಹಗಾರ ಶಿವಾನಂದ ಕಳವೆ, ಮೈಸೂರಿನ ಚರಕ ಪುನರ್ಜೀವಕ ಸಚ್ಚು, ವಿಶ್ವವಿದ್ಯಾಲಯ ದೃಶ್ಯಕಲೆಗಳ ಕಾಲೇಜಿನ ಪ್ರಾಚಾರ್ಯ ಡಾ.ಸತೀಶ್ ಕುಮಾರ್‌ಪಿ.ವಲ್ಲೇಪುರೆ



ಇತರರು ಭಾವಹಿಸುವರು ಎಂದು ತಿಳಿಸಿದರು. ಈ ಬೀಜೋತ್ಸವದಲ್ಲಿ ತರಕಾರಿ ಮತ್ತು ಹಣ್ಣುಗಳು, ಧಾನ್ಯಗಳು ಮತ್ತು ಕಿರುಧಾನ್ಯಗಳು, ಹೂವಿನ ಗಿಡಗಳು ಗೆಡ್ಡೆ ಗೆಣಸುಗಳು ಹಾಗೂ ಇನ್ನಿತರ ಅಪರೂಪದ ತಳಿಗಳ ದೇಸಿ ಬೀಜಗಳು ಸಿಗಲಿವೆ. ಬೀಜ ಲೋಕವನ್ನು ಅನ್ವೇಷಿಸಿ ಮತ್ತು ನಿಮ್ಮ ಸ್ವಂತ ಆಹಾರವನ್ನು ಬೆಳೆಯಲು ಪಾರಂಪರಿಕ ಬೀಜಗಳನ್ನು ಇಲ್ಲಿಂದ ಮನೆಗೆ ಕೊಂಡೊಯ್ಯಿರಿ. 88672 02370, 81509 44842 ಸಂಪರ್ಕಿಸಬಹುದು ಎಂದರು.

ಅಭಿಷೇಕ್, ಅಶೋಕ ಕುಕ್ಕವಾಡ , ಕೃಷ್ಣ ಮೋಹನ್, ಹನುಮಂತಪ್ಪ ಇದ್ದರು.

ಸೇವಾ ಮನೋಭಾವನೆಯುಳ್ಳವರು ಮಾತ್ರ ಅಧಿಕಾರ ಹಿಡಿಯಲು ಸಾಧ್ಯ

ನರಸಿಂಹರಾಜು ಹುಟ್ಟುಹಬ್ಬದಲ್ಲಿ ಮಂಜುನಾಥ್ ಅಭಿಮತ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಸೇವಾ ಮನೋಭಾವನೆಯುಳ್ಳವರು ಮಾತ್ರ ರಾಜಕೀಯದಲ್ಲಿ ಅಧಿಕಾರ ಹಿಡಿಯಬಹುದು ಎಂದು ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್ ಹೇಳಿದರು.

ನಗರದ ಐ.ಎಂ.ಎ.ಹಾಲ್‌ನಲ್ಲಿ ಗುರುವಾರ ಜಿಪಂ ಮಾಜಿಸದಸ್ಯ ಆರ್.ನರಸಿಂಹರಾಜುರವರಹುಟ್ಟುಹಬ್ಬದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲಿ ಎಡವಿದ್ದೇವೆ, ಹಿಂದುಳಿದಿದ್ದೇವೆ ಎನ್ನುವುದನ್ನು ಮಾದಿಗ ಜನಾಂಗ ಸೂಕ್ಷ್ಮವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕು. 2004 ರಲ್ಲಿನಾನು ಹಿರಿಯೂರು ವಿಧಾನಸಭೆ ಚುನಾವಣೆಯಲ್ಲಿಸ್ಪರ್ಧಿಸಿದಾಗಮಾದಿಗರಸ್ಥಿತಿಗತಿ ಎಷ್ಟು ಕೆಟ್ಟದಾಗಿದೆ ಎನ್ನುವುದು ಅರಿತೆ. ಮತಯಾಚನೆಗಾಗಿ ಗೊಲ್ಲರಹಟ್ಟಿಗೆ ಹೋದಾಗ ಅನೇಕ ಕಟ್ಟುಪಾಡುಗಳನ್ನು ಎದುರಿಸಿದ್ದೇನೆ ಆಗ ಮಾದಿಗರು ಇನ್ನೂ

ಅಸ್ಪೃಶ್ಯತೆ ಅನುಭವಿಸುತ್ತಿದ್ದಾರೆ ಎನ್ನುವುದು ಅರ್ಥವಾಯಿತು. ಕಂದಾಚಾರ, ಮೂಢನಂಬಿಕೆಯಿಂದ ಯಾದವರು ಹೊರಬರಲು ಆಗುತ್ತಿಲ್ಲ. ಅಹಿಂದ ಮಧ್ಯದಲ್ಲಿ ಸಮರವಾಗುತ್ತಿದೆ. ಎಚ್ಚೆತ್ತುಕೊಳ್ಳದಿದ್ದರೆ ಮಕ್ಕಳ ಭವಿಷ್ಯಕ್ಕೆ ಕುತ್ತು ಬರುತ್ತದೆ ಎಂದರು. ರಾಜ್ಯದಲ್ಲಿ 38 ಲಕ್ಷ ಮಾದಿಗರಿದ್ದು, ಕೇವಲ 96 ಸಾವಿರ ಮಂದಿ ಮಾತ್ರ ಸರ್ಕಾರಿನೌಕರಿಯಲ್ಲಿದ್ದಾರೆ.ಮಾದಿಗಮಹಾಸಭಾದಿಂದ ಸಮೀಕ್ಷೆ ಮಾಡಿಸುತ್ತೇನೆ ಎಂದರು.

ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ



ಮಾತನಾಡಿ, ತುರ್ತು ಸಂದರ್ಭಗಳಲ್ಲಿ ರಕ್ತದ ಅವಶ್ಯಕತೆಯಿರುತ್ತದೆ. ರಕ್ತದಾನದಿಂದ

ಸಾವು-ಬದುಕಿನನಡುವೆಹೋರಾಟನಡೆಸುತ್ತಿರುವವರ ಪ್ರಾಣ ಉಳಿಸಬಹುದು ಎಂದರು. ಜಿಪಂ ಮಾಜಿ ಸದಸ್ಯ ಆರ್.ಕೃಷ್ಣಮೂರ್ತಿ ಮಾತನಾಡಿ, ರಕ್ತದಾನಿಗಳು ಸ್ವಇಚ್ಚೆಯಿಂದ ರಕ್ತದಾನ ಮಾಡಬೇಕು. ಹುಟ್ಟು ಹಬ್ಬವನ್ನು ಅದ್ಧೂರಿಯಾಗಿ ಆಚರಿಸಿಕೊಳ್ಳುವ ಬದಲು ರಕ್ತದಾನದ ಮೂಲಕ ತಮ್ಮ ಜನ್ಮದಿನ ಆಚರಿಸಿಕೊಳ್ಳುತ್ತಿರುವುದು ಅವರಲ್ಲಿರುವ ಸೇವಾ ಗುಣವನ್ನು ತೋರಿಸುತ್ತದೆ ಎಂದರು.

ಪ್ರೌಢಶಾಲಾಶಿಕ್ಷಣಇಲಾಖೆನಿವೃತ್ತಜಂಟಿನಿರ್ದೇಶಕ ರೇವಣಸಿದ್ದಪ್ಪ, ಕುರುಬರಸಂಘದ ಜಿಲ್ಲಾಧ್ಯಕ್ಷ ಶ್ರೀರಾಂ, ಸಹಾಯಕ ಆಯುಕ್ತ ನಾರಾಯಣಸ್ವಾಮಿ ಮಾತನಾಡಿದರು. ಎಸಿ ಕಾಂತರಾಜ್, ತಹಸೀಲ್ದಾರ್ ಗೋವಿಂದರಾಜ್, ಅಣ್ಣಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್, ಶಂಶೀರ್, ಶಿಲ್ಪಾ ವೇದಿಕೆಯಲ್ಲಿದ್ದರು.

ಸುಧಾಕರ್ ಆರೋಗ್ಯ ವೃದ್ಧಿಗೆ ಪೂಜೆ

ಉಷಾ ನೇತೃತ್ವದಲ್ಲಿ ಪಂಚಮುಖೇಶ್ವರ ದೇಗುಲದಲ್ಲಿ ಮೃತ್ಯುಂಜಯ ಹೋಮ



ಚಳ್ಳಕೆರೆ ನಗರದ ಅಜ್ಜಯ್ಯನಗುಡಿ ರಸ್ತೆಯಲ್ಲಿರುವ ಪಂಚಮುಖೇಶ್ವರ ದೇವಸ್ಥಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್‌ಅವರ ಆರೋಗ್ಯ ಶೀಘ್ರ ಚೇತರಿಸಿಕೊಳ್ಳುವಂತೆ ವಿಶೇಷ ಪೂಜೆ ಸಲ್ಲಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಚಳ್ಳಕೆರೆ

ನಗರದ ಅಜ್ಜಯ್ಯನಗುಡಿ ರಸ್ತೆಯಲ್ಲಿರುವ ಪಂಚಮುಖೇಶ್ವರ ದೇವಸ್ಥಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್‌ಅವರ ಆರೋಗ್ಯ ಶೀಘ್ರ ಚೇತರಿಸಿಕೊಳ್ಳುವಂತೆ ವಿಶೇಷ ಪೂಜೆ ಹಾಗೂ ಮೃತ್ಯುಂಜಯ ಹೋಮವನ್ನು ನಡೆಸಲಾಯಿತು.

ರಾಜೀವ್ ಗಾಂಧಿ ಪಂಚಾಯಿತ್ ರಾಜ್ ಸಂಸ್ಥೆಯ ತಾಲೂಕು ಅಧ್ಯಕ್ಷೆ ಉಷಾ ಚಂದ್ರಕುಮಾರ್‌ಅವರ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪೂಜೆ, ರುದ್ರಾಭಿಷೇಕ, ನವಗ್ರಹ ಶಾಂತಿ, ಆಂಜನೇಯ ಸಹಸ್ರನಾಮ ಪೂಜೆ, ಗಣಪತಿ ಆರಾಧನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಿದರು.

ಈ ವೇಳೆ ಮಾತನಾಡಿದ ಶ್ರೀಮತಿ ಉಷಾ ಚಂದ್ರಕುಮಾರ್, ಜಿಲ್ಲಾಉಸ್ತುವಾರಿಸಚಿವಡಿ.ಸುಧಾಕರ್ ಅವರು ಜನಸಾಮಾನ್ಯರ ಹೃದಯ ಗೆದ್ದ ರಾಜಕಾರಣಿಯಾಗಿದ್ದಾರೆ. ದಲಿತರು, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರ ಬಗ್ಗೆ ಅಪಾರ ಕಾಳಜಿ ಹೊಂದಿರುವ ಸಚಿವರು, ಜಿಲ್ಲೆಯ ಕಣ್ಮಣಿ ನಾಯಕರಾಗಿದ್ದಾರೆ. ಸಚಿವರದು ಚಳ್ಳಕೆರೆ ಮೂಲ ಸ್ಥಳವಾಗಿದ್ದು, ಇಲ್ಲಿಯೂ ಶಾಸಕರಾಗಿ ಅಪಾರ ಸೇವೆ ಮಾಡಿದ್ದಾರೆ. ಇಂತಹ ಧೀಮಂತ ನಾಯಕ ನೂರ್ ಕಾಲಬಾಳಿಬೆಳಗಬೇಕು. ಇವರಿಂದನಾಡಿಗೆಒಳಿತಾಗುತ್ತದೆ. ಇವರು ಬೇಗ ಚೇತರಿಸಿಕೊಳ್ಳಲಿ, ಬೇಗ ಮತ್ತೇ ಜನಸೇವೆಗೆ ತೊಡಗಲಿ ಎಂದು ಹಾರೈಸಿದರು.

ಪುರೋಹಿತರಾದ ತ್ಯಾಗರಾಜ ಜೋಷಿ ಹಾಗೂ ಸುಬ್ರಹ್ಮಣ್ಯ ಸ್ವಾಮೀಜಿ ಅವರು ಪೂಜಾ ಕಾರ್ಯಕ್ರಮ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರಾದ ಶಿವಶಂಕರ್, ನಾಗರಾತ್ನ, ಗೀತಾ, ಮಲ್ಲಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಉಸ್ತುವಾರಿ ಸಚಿವ ಡಿ. ಸುಧಾಕರ್ ಚಿಕಿತ್ಸೆಗೆ ದೆಹಲಿ ವೈದ್ಯರ ಆಗಮನ

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾಹಿತಿ



ದೆಹಲಿಯ ಏಮ್ಸ್‌ನ ಖ್ಯಾತ ನರರೋಗ ತಜ್ಞ ಡಾ.ಪ್ರವಿಣ್ ಗುಪ್ತ ಅವರೊಂದಿಗೆ ಚಳ್ಳಕೆರೆ ಶಾಸಕ ರಘುಮೂರ್ತಿ ಹಾಗೂ ಸುಧಾಕರ್‌ಕುಟುಂಬವರು ಸಮಾಲೋಚನೆ ನಡೆಸಿದರು.

• **ಕನ್ನಡಪ್ರಭ ವಾರ್ತೆ** ಚಳ್ಳಕೆರೆ

ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್‌ಅವರ ಆರೋಗ್ಯ ತಪಾಸಣೆಗೆ ದೆಹಲಿ ಏಮ್ಸ್‌ನ ಪ್ರಖ್ಯಾತ ನರರೋಗ ತಜ್ಞರಾದ ಡಾ.ಪ್ರವೀಣ್‌ಗುಪ್ತ ಬೆಂಗಳೂರಿಗೆ ಆಗಮಿಸಿದ್ದಾರೆ ಎಂದು ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದ ಶಾಸಕ ಟಿ. ರಘುಮೂರ್ತಿ ಹೇಳಿದರು.

ಗುರುವಾರ ಸಂಜೆ ಬೆಂಗಳೂರಿನ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಕುರಿತು ಕನ್ನಡಪ್ರಭದೊಂದಿಗೆ ಮಾತನಾಡಿ, ಸಚಿವ ಸುಧಾಕರ್‌ಅವರ ಆರೋಗ್ಯ ವಿಚಾರಿಸಲು ಗುರುವಾರ ಸಂಜೆ ಆಸ್ಪತ್ರೆಗೆ ತೆರಳಿದ್ದೆ. ಗುರುವಾರವೇ ದೆಹಲಿಯಿಂದ ಸಚಿವ ಸುಧಾಕರ್ ಆರೋಗ್ಯ ತಪಾಸಣೆಗೆ ಆಗಮಿಸಿದ್ದ ಡಾ.ಪ್ರವೀಣ್ ಗುಪ್ತ ಅವರ ಜೊತೆ ಸಮಾಲೋಚನೆ ನಡೆಸಲಾಯಿತು ಎಂದು ತಿಳಿಸಿದರು. ಶುಕ್ರವಾರದಿಂದ ಚಿಕಿತ್ಸೆ ನೀಡಲಾಗುವುದು. ಕೋಮಾದಲ್ಲಿ ಇರುವುದರಿಂದ ಒಂದು ವಾರದಲ್ಲಿ ಎಚ್ಚರ ಬರುವಂತಹ ಚಿಕಿತ್ಸೆ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಉಳಿದಂತೆ ಬೇರೆಲ್ಲಾ ಚಿಕಿತ್ಸೆ ಮುಂದುವರೆದಿದೆ. ಈ ವೇಳೆ ಕುಟುಂಬದ ಸದಸ್ಯರು ಹಾಜರಿದ್ದರು ಎಂದರು.

ಶೈಕ್ಷಣಿಕ ಜವಾಬ್ದಾರಿ | ಹೊಸಹಳ್ಳಿ ಸರ್ಕಾರಿ ಶಾಲೆ ಬಡ್ತಿ ಮುಖ್ಯ ಶಿಕ್ಷಕ ಶ್ರೀನಿವಾಸ್ ಅರುಣ್ ಕುಮಾರ್ ಅಭಿಮತ

ವಿದ್ಯಾರ್ಥಿಗಳ ಕಲಿಕೆಗೆ ಗುಣಮಟ್ಟದ ಬೋಧನೆ ಅಗತ್ಯ


• **ಕನ್ನಡಪ್ರಭ ವಾರ್ತೆ** ಚಳ್ಳಕೆರೆ

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಬೋಧನೆ ದೊರೆತರೆ ಮಕ್ಕಳ ಕಲಿಕಾ ಸಾಮರ್ಥ್ಯವೂ ಹೆಚ್ಚಲಿದೆ ಎಂದು ತಳಕು ಹೋಬಳಿ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಡ್ತಿ ಮುಖ್ಯ ಶಿಕ್ಷಕ ಶ್ರೀನಿವಾಸ್ ಅರುಣ್ ಕುಮಾರ್‌ಹೇಳಿದರು.

ತಾಲೂಕಿನತಳಕುಹೋಬಳಿಯಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಡ್ತಿ ಮುಖ್ಯ ಶಿಕ್ಷಕರಾಗಿ ಕರ್ತವ್ಯಕ್ಕೆ ಹಾಜರಾದ ಸಂದರ್ಭದಲ್ಲಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿರುವುದರಿಂದ ಹೆಚ್ಚಿನ ಸಂಖ್ಯೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಾಲೆಗೆ ಸೇರ್ಪಡೆಯಾಗುತ್ತಿದ್ದಾರೆ. ಪ್ರತಿಯೊಬ್ಬ ಶಿಕ್ಷಕನು ತನ್ನ ಕರ್ತವ್ಯವನ್ನು ಅರಿತು ಕಾರ್ಯನಿರ್ವಹಿಸಿದಾಗಮಾತ್ರ ಶಿಕ್ಷಣಕ್ಷೇತ್ರದ ಹಿರಿಮೆ ಹೆಚ್ಚುತ್ತದೆ ಎಂದು ತಿಳಿಸಿದರು.

ತಾಲೂಕಿನ ನಾಯಕನಹಟ್ಟಿ ಹೋಬಳಿಯ ಎನ್.ದೇವರಹಳ್ಳಿ ಸರ್ಕಾರಿ ಹಿರಿಯ



ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಬಡ್ತಿಮುಖ್ಯಶಿಕ್ಷಕರಾಗಿ ಆಗಮಿಸಿದ ಶ್ರೀನಿವಾಸ್ ಅರುಣ್‌ಕುಮಾರ್ ಅವರನ್ನು ಶಿಕ್ಷಕರು ಸ್ವಾಗತಿಸಿದರು.

ಪ್ರಾಥಮಿಕ ಶಾಲೆಯಲ್ಲಿ ಸಹಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದ ಇವರು ಬಡ್ತಿ ಮುಖ್ಯಶಿಕ್ಷಕರಾಗಿ ಮುಂಬಡ್ತಿ ಪಡೆದು ಹೊಸಹಳ್ಳಿ ಶಾಲೆಗೆ ಕರ್ತವ್ಯಕ್ಕೆ ಹಾಜರಾದ ಸಂದರ್ಭದಲ್ಲಿಶಾಲೆಯಶಿಕ್ಷಕರಅಭಿನಂಧನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಹಿರಿಯ ಶಿಕ್ಷಕ ಕೆ.ಎಸ್.ಶ್ರೀಕಾಂತ್ ಮಾತನಾಡಿ, ಕಳೆದ ಕೆಲವು ತಿಂಗಳಿಂದ ನಮ್ಮ ಶಾಲೆಯ ಪ್ರಭಾರ ಮುಖ್ಯಶಿಕ್ಷಕನಾಗಿ ಕಾರ್ಯನಿರ್ವಹಿಸುವ ಅವಕಾಶ ದೊರಕಿತ್ತು. ನನ್ನ ಅವಧಿಯಲ್ಲಿ ಶಾಲೆಯಲ್ಲಿ ನಡೆದ ಹಲವಾರು ಕಾರ್ಯಕ್ರಮಗಳಿಗೆ ಎಲ್ಲರೂ ಸಹಕಾರ ನೀಡಿದ್ದೀರಿ. ನಮ್ಮ ಶಾಲೆಗೆ ಮುಖ್ಯ ಶಿಕ್ಷಕರಾಗಿ ಶ್ರೀನಿವಾಸ್ ಅರುಣ್‌ಕುಮಾರ್ ಇಂದು ಅಧಿಕಾರ ಸ್ವೀಕರಿಸಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಶಾಲೆಯ ಶೈಕ್ಷಣಿಕ ಪ್ರಗತಿಗೆ ಪ್ರಾಮಾಣಿಕವಾಗಿ ಶ್ರಮಿಸೋಣ. ಗ್ರಾಮದ ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಗ್ರಾಮದ ಜನರೂ ಹೆಚ್ಚು ಸಹಕಾರ ನೀಡುತ್ತಾ ಬಂದಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಕ್ರಮಗಳನ್ನು ರೂಪಿಸಿ ಶಾಲೆಯ ಅಭಿವೃದ್ಧಿಗೆ ಕೈಜೋಡಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ಚಿಟ್ಟಿಬಾಬು, ನುಸ್ರತ್ ಉನ್ನೀಸಾ, ಮಂಜುಳಾ, ಆಶಾ, ಎನ್.ದೇವರಹಳ್ಳಿ ಶಾಲೆಯ ಮುಖ್ಯಶಿಕ್ಷಕ ಬಸವರಾಜು ಉರಿಗಡಲಿ, ಶಿಕ್ಷಕರಾದ ಚಂದಣ್ಣ, ರಾಘವೇಂದ್ರ, ಜಿ.ಟಿ.ಆನಂದ, ಮಂಜಮ್ಮ ಮುಂತಾದವರು ಉಪಸ್ಥಿತರಿದ್ದರು.

ರೈತರ ಖಾತೆಗೆ ಬೆಳೆವಿಮೆ ಹಣ ವಿಳಂಬ

ಚಿತ್ರದುರ್ಗದಲ್ಲಿ ರೈತ ಸಂಘದಿಂದ ಪ್ರತಿಭಟನೆ | ಅಪರ ಡಿಸಿಗೆ ಮನವಿ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ರೈತರ ಬ್ಯಾಂಕ್ ಖಾತೆಗಳಿಗೆ ಬೆಳೆವಿಮೆ ಹಣ ಜಮಾ ಮಾಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಮಾ ಕಂಪನಿಗಳು ಹಾಗೂ ಜಿಲ್ಲಾಡಳಿತದ ನಿರ್ಲಕ್ಷತೆ ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಗುರುವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಆಗಮಿಸಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ರೈತರನ್ನು ಒನಕೆ ಓಬವ್ವ ವೃತ್ತದಲ್ಲಿ ಪೊಲೀಸರು ತಡೆದು ನಿಲ್ಲಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ವರ್ಷ ಮುಂಗಾರು ಮಳೆಯ ಕೊರತೆಯಿಂದಾಗಿ ಜಿಲ್ಲೆಯಲ್ಲಿ ಅನೇಕ ಬೆಳೆಗಳು ನಾಶವಾಗಿವೆ. ಚಳ್ಳಕೆರೆ ತಾಲೂಕಿನಲ್ಲಿ ಶೇಂಗಾ ಬೆಳೆ ಹಾನಿಯಾಗಿದ್ದರಿಂದ ರೈತ ಕೈಸುಟ್ಟುಕೊಂಡು ಕೃಷಿಗಾಗಿ ಮಾಡಿದ ಸಾಲ ತೀರಿಸಲು ಆಗದೆ ಆತ್ಮಹತ್ಯೆಯ ಹಾದಿ ಹಿಡಿಯುವಂತಾಗಿದೆ. ಇಂತಹ ಕಷ್ಟದ ಪರಿಸ್ಥಿತಿಯಲ್ಲಿದ್ದರೂ ವಿಮೆ ಕಂಪನಿಗಳು ಬೆಳೆ ವಿಮೆ ಹಣವನ್ನು ನೀಡುತ್ತಿಲ್ಲ. ಚಳ್ಳಕೆರೆ ತಾಲೂಕು ಕಚೇರಿ ಎದುರು ಧರಣಿ ನಡೆಸಿದಾಗ ಅಧಿಕಾರಿಗಳು ಸ್ಥಳಕ್ಕೆ ಬಂದು ಬೆಳೆವಿಮೆ ಹಣ ಪಾವತಿಸಲಾಗುವುದೆಂಬ ಭರವಸೆ ನೀಡಿದ್ದನ್ನು ಬಿಟ್ಟರೆ ಯಾವ



ರೈತನ ಖಾತೆಗೂ ಹಣ ಬಂದಿಲ್ಲಎಂದು ಆಕ್ರೋಶ ವ್ಯಕ್ತಪಡಿಸಿದರು. ಮಧ್ಯ ಕರ್ನಾಟಕದ ಬಯಲು ಸೀಮೆ ಚಿತ್ರದುರ್ಗಕ್ಕೆ ಭದ್ರಾ ಮೇಲ್ದಂಡೆ ಯೋಜನೆಗಾಗಿ ಕೇಂದ್ರ ಸರ್ಕಾರ 5,300 ಕೋಟಿ ರು. ಘೋಷಿಸಿರುವುದು ಇನ್ನು ಭರವಸೆಯಾಗಿಯೇ ಉಳಿದುಕೊಂಡಿದೆ. ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ಆಗಮಿಸುತ್ತಿರುವ ಕೇಂದ್ರ ಗೃಹ ಸಚಿವ ಅಮಿತ್‌ಶಾರವರು ಕೇಂದ್ರ ಸರ್ಕಾರ ನೀಡಿರುವಆಶ್ವಾಸನೆಯಂತೆ5,300ಕೋಟಿರು.ಬಿಡುಗಡೆಗೊಳಿಸಲಿ ಎಂದು ಒತ್ತಾಯಿಸಿದರು. ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಧನಂಜಯ ಹಂಪಯ್ಯನಮಾಳಿಗೆ, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ತಾಲೂಕು ಅಧ್ಯಕ್ಷ ಟಿ.ಹಂಪಣ್ಣ, ಕೆ.ಸಿ.ಹೊರಕೇರಪ್ಪ, ಬಿ.ಓ.ಶಿವಕುಮಾರ್, ಆರ್.ಚೇತನ್ ಯಳನಾಡು, ಜಿ.ಸುರೇಶ್‌ಬಾಬು, ಬಿ.ಪಿ.ಉಮಾಪತಿ, ಟಿ.ಮುನಿಸ್ವಾಮಿ, ಆರ್.ಶಂಕರಮೂರ್ತಿ ಅನೇಕರು ಪಾಲ್ಗೊಂಡಿದ್ದರು.

ಸೈಕಲಲ್ಲಿ ರಾಜ್ಯ ಸುತ್ತಾಡಿ ಪಕ್ಷ ಕಟ್ಟಿದ ಬಿ.ಎಸ್.ಯಡಿಯೂರಪ್ಪ

ಸಿದ್ದೇಶ್ವರ ಬಣ್ಣನೆ | ಅಭಿಮಾನೋತ್ಸವಕ್ಕೆ ರಾಜ್ಯದೆಲ್ಲೆಡೆಯಿಂದ 10 ಲಕ್ಷ ಅಭಿಮಾನಿಗಳು

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಐದು ದಶಕಗಳ ಸಾರ್ವಜನಿಕ ಸೇವೆಗೆ ಗೌರವಿಸುವ, ಅಭಿನಂದಿಸುವ ನಿಟ್ಟಿನಲ್ಲಿ ಚಿತ್ರದುರ್ಗದಲ್ಲಿ ಮೇ 9ರಂದು ಹಮ್ಮಿಕೊಂಡಿರುವ ಅಭಿನಂದನೋತ್ಸವಕ್ಕೆ ರಾಜ್ಯದ ಮೂಲೆ ಮೂಲೆಯಿಂದ ಸುಮಾರು 9-10 ಲಕ್ಷ ಅಭಿಮಾನಿಗಳು ಪಾಲ್ಗೊಳ್ಳುವರು. ಜತೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಹ ಭಾಗವಹಿಸುವರು ಎಂದು ಕೇಂದ್ರದ ಮಾಜಿ ಸಚಿವ, ಬಿಜೆಪಿ ಹಿರಿಯ ನಾಯಕ ಜಿ.ಎಂ.ಸಿದ್ದೇಶ್ವರ ತಿಳಿಸಿದರು.

ನಗರದ ಜಿಎಂಐಟಿ ಅತಿಥಿ ಗೃಹದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಮಧ್ಯಾಹ್ನ 3.30ಕ್ಕೆ ಅಮಿತ್ ಶಾ ಚಿತ್ರದುರ್ಗಕ್ಕೆ ಆಗಮಿಸಿ, ಬಿ.ಎಸ್.ಯಡಿಯೂರಪ್ಪ ಅಭಿನಂದನೋತ್ಸವದಲ್ಲಿ ಪಾಲ್ಗೊಳ್ಳುತ್ತಾರೆ ಎಂದರು.

ಸೈಕಲ್ ಮೇಲೆ ಸುತ್ತಾಡಿ ಯಡಿಯೂರಪ್ಪ, ಅನಂತಕುಮಾರ ಪಕ್ಷ ಕಟ್ಟಿದರು. ಹರಪನಹಳ್ಳಿ ಒಳಗೊಂಡಂತೆ ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದರು.

ಸ್ಟ್ರಾಂಗ್ ರೂಂ ಬೀಗ ಕಳೆದಿದ್ದೇ ನೋಡಿರಲಿಲ್ಲ!: ಅದೆಷ್ಟು ಅಪಹಾಸ್ಯವೆಂದರೆ ಮತ ಎಣಿಕೆ ಕೇಂದ್ರದ ಸ್ಟ್ರಾಂಗ್ ರೂಂ ಬೀಗವನ್ನೇ ಕಳೆದಿದ್ದಾರೆ. ಸ್ಟ್ರಾಂಗ್ ರೂಂ ಬೀಗವನ್ನೇ ಕಳೆದಿದ್ದನ್ನು ನಾವು ಎಂದಿಗೂ ನೋಡಿರಲಿಲ್ಲ. ಸ್ಟ್ರಾಂಗ್ ರೂಂಗೆ ಬೀಗ ಹಾಕಿದ್ದು ಯಾರು, ಕಳೆದಿದ್ದು ಯಾರು ಎಂದು ಪತ್ತೆ ಮಾಡಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಚುನಾವಣಾ ಆಯೋಗಕ್ಕೂ ದೂರು ನೀಡಿದ್ದೇವೆ ಎಂದರು.

ಮಾಜಿ ಶಾಸಕ ಎಚ್.ಪಿ.ರಾಜೇಶ, ಬಯಲುಸೀಮೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಅಣಬೇರು ಜೀವನಮೂರ್ತಿ, ಶ್ರೀನಿವಾಸ ಟಿ.ದಾಸಕರಿಯಪ್ಪ, ಯಶವಂತರಾವ್ ಜಾಧವ್, ದೇವರಮನಿ ಶಿವಕುಮಾರ, ರಾಜನಹಳ್ಳಿ ಶಿವಕುಮಾರ, ದೊಗ್ಗಳ್ಳಿ ವೀರೇಶ, ಸಿದ್ದಪ್ಪ, ಮಾಯಕೊಂಡ ಶ್ಯಾಮ್, ಎನ್.ಎಂ.ಮುರುಗೇಶ ಆರಾಧ್ಯ, ಶಿವನಗೌಡ ಪಾಟೀಲ, ಅತಿಥ್ ಅಂಬರಕರ್ ಇತರರು ಇದ್ದರು.



ದಾವಣಗೆರೆಯಲ್ಲಿ ಗುರುವಾರ ಕೇಂದ್ರದ ಮಾಜಿ ಸಚಿವ ಜಿ.ಎಂ.ಸಿದ್ದೇಶ್ವರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಅಣಬೇರು ಜೀವನಮೂರ್ತಿ, ಶ್ರೀನಿವಾಸ ಟಿ.ದಾಸಕರಿಯಪ್ಪ ಇತರರು ಇದ್ದರು.

ಕಡೇ ಹಂತದಲ್ಲಿ ಕಾಂಗ್ರೆಸ್ಸಿನ ರಾಜಕೀಯ ಆಟ

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯ ಅಂತಿಮ ಹಂತದಲ್ಲಿ ಬಿರುಸಿನ ರಾಜಕೀಯ ಆಟ ನಡೆದಿದ್ದು, ಲೋಕಸಭೆ ಚುನಾವಣೆಯಲ್ಲಿ ಹೇಗೆ ಬಿಜೆಪಿ ಸೋತಿತ್ತೋ ಅದೇ ರೀತಿ ದಕ್ಷಿಣ ಉಪ ಚುನಾವಣೆಯಲ್ಲೂ ನಮ್ಮ ಅಭ್ಯರ್ಥಿ ಸೋಲು ಕಂಡರು ಎಂದು ಜಿ.ಎಂ.ಸಿದ್ದೇಶ್ವರ ಹೇಳಿದರು. ಲೋಕಸಭೆ ಚುನಾವಣೆಯಲ್ಲಿ ಸೋತಂತೆ ದಕ್ಷಿಣ ಉಪ ಚುನಾವಣೆಯಲ್ಲೂ ನಮ್ಮ ಅಭ್ಯರ್ಥಿ ಸೋತಿದ್ದು, ಇದರ ಮೇಲೆ ಹೆಚ್ಚಾಗಿ ನಾನು ಏನನ್ನೂ ಹೇಳುವುದಿಲ್ಲ. ಜನರು ಕೊಟ್ಟ ತೀರ್ಪನ್ನು ನಾವು ಒಪ್ಪಿಕೊಳ್ಳಬೇಕು. 2028ರ ಸಾರ್ವತ್ರಿಕ ಚುನಾವಣೆಯಲ್ಲಿ ದಾವಣಗೆರೆ ದಕ್ಷಿಣ ಸೇರಿದಂತೆ ಲೋಕಸಭಾ ಕ್ಷೇತ್ರದ ಎಂಟೂ ವಿಧಾನಸಭಾ ಕ್ಷೇತ್ರಗಳನ್ನು ನಾವು ಗೆದ್ದೇ ಗೆಲ್ಲುತ್ತೇವೆ ಎಂದರು.

ಸಮರ್ಥ ದಕ್ಷಿಣದಲ್ಲಿ ಒಳ್ಳೆ ಕೆಲಸ ಮಾಡಲಿ

ಉಪಚುನಾವಣೆಯ ವಿಜೇತ ಅಭ್ಯರ್ಥಿ ಸಮರ್ಥ ಶಾಸಕರಾಗಿ ದಕ್ಷಿಣದಲ್ಲಿ ಒಳ್ಳೆಯ ಕೆಲಸ ಮಾಡಲಿ. ಆದರೆ, ನಾವು ಈ ಸೋಲಿನಿಂದ ಧೃತಿಗೆಡುವುದಿಲ್ಲ. ಜನಾದೇಶ ಗೌರವಿಸುತ್ತೇವೆ. ಮುಂದಿನ ದಿನಗಳಲ್ಲಿ ತಪ್ಪುಗಳನ್ನು ಸರಿಪಡಿಸಿಕೊಳ್ಳುತ್ತೇವೆ ಎಂದು ಸಿದ್ದೇಶ್ವರ ಹೇಳಿದರು,

ದಾವಣಗೆರೆ ಜಿಎಂಐಟಿ ಅತಿಥಿ ಗೃಹ ಮತ್ತೆ ಪವರ್‌ಸೆಂಟರ್ ಆಗಲಿದೆ. ಲೋಕಸಭಾ ಕ್ಷೇತ್ರದ ಎಂಟೂ ವಿಧಾನಸಭಾ ಕ್ಷೇತ್ರಗಳನ್ನು 2028ರಲ್ಲಿ ಗೆಲ್ಲುತ್ತೇವೆ. ಪಾಲಿಕೆಯಲ್ಲೂ ನಾವೇ ಅಧಿಕಾರ ಹಿಡಿಯುತ್ತೇವೆ. ಚಿತ್ರದುರ್ಗದ ಬಿಎಸ್‌ವೈ ಅಭಿನಂದನೋತ್ಸವ ಐತಿಹಾಸಿಕ ಕಾರ್ಯಕ್ರಮವಾಗಿದೆ. ಮುಂದಿನ ದಿನಗಳಲ್ಲಿ ದಾವಣಗೆರೆಯಲ್ಲೂ ಇಂತಹ ಕಾರ್ಯಕ್ರಮ ಮಾಡೋಣ.

• **ಜಿ.ಎಂ.ಸಿದ್ದೇಶ್ವರ** ಕೇಂದ್ರದ ಮಾಜಿ ಸಚಿವ.

ಆಸ್ತಿ ನೋಂದಣೀಲಿ ಡಿಜಿಟಲೀಕರಣ ಪುನರ್ ಪರಿಶೀಲಿಸಿ



ದಾವಣಗೆರೆ: ಸರ್ಕಾರವು ಈ ಕೂಡಲೇ ಪೇಪರ್‌ಲೆಸ್ ಮತ್ತು ಡಿಜಿಟಲಿಕರಣ ಪುನರ್‌ಪರಿಶೀಲಿಸಿ ಸಾರ್ವಜನಿಕರಿಗೆ ಮತ್ತು ಆಸ್ತಿ ಮಾಲೀಕರಿಗೆ ನೆಮ್ಮದಿ ಕಲ್ಪಿಸಬೇಕೆಂದು ಜಿಲ್ಲಾ ದಸ್ತಾವೇಜು (ಪತ್ರ) ಬರಹಗಾರರ ಅಸೋಸಿಯೇಷನ್ ಒತ್ತಾಯಿಸಿದೆ.


ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್ ಅಧ್ಯಕ್ಷ ಡಿ.ಕೆ.ಸಂಗಮೇಶ್ ಎಲಿಗಾರ್ ಮಾತನಾಡಿ, ಈ ಸರ್ಕಾರ, ಈ ಕಂದಾಯ ಸಚಿವರು ಬಂದ ಮೇಲೆ ಸಮಸ್ಯೆಗಳು ಜಾಸ್ತಿಯಾಗಿವೆ. ತಾವೇ ಬುದ್ಧಿವಂತರು ಎಂಬಂತೆ ವರ್ತಿಸುತ್ತಿದ್ದಾರೆ. ತಮಗೆ ತಿಳಿದಂತೆ ಹಾಗೂ ಕೆಲವೇ ಅಧಿಕಾರ ಸಲಹೆ ಪಡೆದು ಸಚಿವರು ನೋಂದಣಿಯಲ್ಲಿ ಬದಲಾವಣೆ ತರುತ್ತಿರುವುದು ಖಂಡನೀಯ ಎಂದರು. ಕಾವೇರಿ ತಂತ್ರಾಂಶದ ಮೂಲಕ ಪೇಪರ್‌ಲೆಸ್ ಡಿಜಿಟಲ್ ನೋಂದಣಿ ಜಾರಿಗೆ ತಂದಿದ್ದು ಇದರಿಂದ ಸಾರ್ವಜನಿಕರ ಆಸ್ತಿ ದಾಖಲಾತಿಗೆ ಭದ್ರತೆ ಇಲ್ಲದಂತಾಗಿದೆ. ಅಲ್ಲದೆ ಆಸ್ತಿ ನೋಂದಣಿ ಆಗಿರುವ ಬಗ್ಗೆ ಯಾವುದೇ ಭೌತಿಕ ಪತ್ರಗಳನ್ನು ಖರೀದಿದಾರರಿಗೆ/ಪಕ್ಷಕಾರರಿಗೆ ನೀಡದೇ ಇರುವುದರಿಂದ ಹಾಗೂ ಡಿಜಿಟಲ್ ಪಾಕರ್‌ನಲ್ಲಿ ಸೇವ್ ಆಗುವುದರಿಂದ ಆಸ್ತಿ ಖರೀದಿದಾರರಿಗೆ ಯಾವುದೇ ನಿಖರವಾದ ಪತ್ರಗಳು, ದಾಖಲೆಗಳು ಸಿಗುವುದಿಲ್ಲ ಎಂದರು. ಆಸ್ತಿ ಖರೀದಿಸಿದವರಿಗೆ ಯಾವುದೇ ಪತ್ರಗಳು ಸಿಗದೇ ಇರುವುದರಿಂದ ಮುಂದೆ ಅವರ ವಾರಸುದಾರರಿಗೆ ಸಹ ಆಸ್ತಿ ಖರೀದಿಸಿರುವ ಬಗ್ಗೆ ಮಾಹಿತಿ ಇರುವುದಿಲ್ಲ. ಆಸ್ತಿಗಳು ಕುಟುಂಬದ ವಾರಸುದಾರರಿಗೆ ಕೈತಪ್ಪಿ ಹೋಗುವ ಸಂಭವ ಹೆಚ್ಚಾಗಿ ಇರುತ್ತದೆ. ಪೇಪರ್‌ಲೆಸ್ ನೋಂದಣಿಯಿಂದ ಭೂ ಮಾಫಿಯಾ ಜನರಿಗೆ ಸರ್ಕಾರವೇ ಅನುಕೂಲ ಮಾಡಿಕೊಟ್ಟಂತಾಗಿರುತ್ತದೆ ಎಂದು ಕಿಡಿಕಾರಿದರು. ಪ್ರಧಾನ ಕಾರ್ಯದರ್ಶಿ ಬಿ.ವಿ.ಶಿವಾನಂದ, ಅಸೋಸಿಯೇಷನ್‌ನ ರಾಜಶೇಖರ್, ಮದುಸೂಧನ್, ಹನುಮಂತಪ್ಪ ಇದ್ದರು.

ಪವರ್ ಲಿಫ್ಟಿಂಗ್: ದಾವಣಗೆರೆ ಕ್ರೀಡಾಪಟುಗಳ ಸಾಧನೆ



ದಾವಣಗೆರೆ: ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಕಿನ್ನಿಗೋಳಿಯಲ್ಲಿ ಕರ್ನಾಟಕ ಪವರ್‌ಲಿಫ್ಟಿಂಗ್ ಅಸೋಸಿಯೇಷನ್ ವತಿಯಿಂದ ಇತ್ತೀಚಿಗೆ ಯುವಕ-ಯುವತಿಯರಿಗೆ ರಾಜ್ಯ ಮಟ್ಟದ ಪವರ್‌ಲಿಫ್ಟಿಂಗ್ ಸ್ಪರ್ಧೆ ಹಮ್ಮಿಕೊಂಡಿದ್ದು ದಾವಣಗೆರೆಯ ಪವರ್ ಲಿಫ್ಟರ್‌ಗಳಾದ ಸುಜೀಲ್ ಅಹಮ್ಮದ್ 2 ಚಿನ್ನದ ಪದಕ, ದೀಪಾ ರಂಗಸ್ವಾಮಿ 1 ಚಿನ್ನದ ಪದಕ, ಎಸ್.ಪಿ.ಸಾನಿಯಾ, ವಿ.ರೋಹಿತ್, ಎಚ್.ಜೆ.ಗಣೇಶ್ ತಲಾ ಒಂದು ಬೆಳ್ಳಿ ಪದಕ, ಎಂ.ವಿಷ್ಣು, ಮಂಜುನಾಥ, ಕೃಷ್ಣ ತಲಾ ಒಂದು ಕಂಚಿನ ಪದಕ ಪಡಿದಿದ್ದಾರೆ.

ದಾವಣಗೆರೆ ವ್ಯಾಯಾಮಶಾಲೆಯ ತರಬೇತುದಾರ ಎನ್.ಹನುಮಂತ್, ದಾದರ್ಸ್ ಟೀಮ್ಸ್ ತರಬೇತಿಗಾರರಜ್ವಿ ಖಾನ್, ಜಿ.ಟಿ.ಜಿ. ಕಾರ್ಯದರ್ಶಿ ಎಚ್.ದಾದಾಪೀರ್, ಎನ್.ಸುರೇಶ್ ಕುಮಾರ್, ಎಂ.ಎಸ್.ಷಣ್ಮುಖ ಇತರರು ಉಪಸ್ಥಿತರಿದ್ದು ಈ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿದರು.



ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026
ಚಿತ್ರದುರ್ಗ

ಗರಿಷ್ಠ 35°C | ಕನಿಷ್ಠ 25°C

ಸುದ್ದಿ ಸಿಂಚನ

6ನೇ ತರಗತಿಗೆ ಪ್ರವೇಶಾತಿ: 12ಕ್ಕೆ ಅರ್ಹತಾ ಪರೀಕ್ಷೆ

ಚಿತ್ರದುರ್ಗ: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2026-27ನೇ ಸಾಲಿಗೆ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಮೇ 12ರಂದು ಅರ್ಹತಾ ಪರೀಕ್ಷೆ ನಡೆಯಲಿದೆ. ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ 6ನೇ ತರಗತಿ ಪ್ರವೇಶಕ್ಕಾಗಿ ಈ ಪರೀಕ್ಷೆ ನಡೆಯಲಿದ್ದು, ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಆಹ್ವಾನಿಸಲಾಗಿದೆ. ಪರೀಕ್ಷೆಯು ಮೇ 12ರಂದು ಬೆಳಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ನಗರಸಭೆ ಕಾರ್ಯಾಲಯದ ಹತ್ತಿರವಿರುವ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಪಿಯು ಕಾಲೇಜಿನಲ್ಲಿ ನಡೆಯಲಿದೆ. ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು/ಪೋಷಕರು ಇಲಾಖೆಯ ವೆಬ್‌ಸೈಟ್ sw.kar.nic.in ಮೂಲಕ ತಮ್ಮ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳಬೇಕು. ಪರೀಕ್ಷಾರ್ಥಿಗಳು ಅಂದು ಬೆಳಗ್ಗೆ 10 ಗಂಟೆಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ಯಾರಂಟಿಗಳೇ ಅಭ್ಯರ್ಥಿಗಳ ಜಯಕ್ಕೆ ಕಾರಣ:ಯೋಗೇಶ್



ಮೊಳಕಾಲ್ಮೂರು: ದಾವಣಗೆರೆ ಮತ್ತು ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಸರ್ಕಾರದ ಗ್ಯಾರಂಟಿ ಯೋಜನೆಗಳೇ ಅಭ್ಯರ್ಥಿಗಳ ಗೆಲುವಿಗೆ ಕಾರಣ ಎಂದು ದ್ರಾಕ್ಷಿ ವೈನ್ ಬೋರ್ಡ್ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು ಹೇಳಿದರು. ಬಡವರ ಕಲ್ಯಾಣಕ್ಕಾಗಿ ಜಾರಿ ಮಾಡಿರುವ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ. ಜಾತ್ಯತೀತವಾಗಿ ಇದರ ಪ್ರಯೋಜನ ಪಡೆದಿರುವ ಫಲಾನುಭವಿಗಳು ಪಕ್ಷದ ಬೆಂಬಲಕ್ಕೆ ನಿಂತಿದ್ದಾರೆ. ಇದು ಗೆಲುವಿಗೆ ಒತ್ತು ನೀಡಿದೆ. ಕೇರಳದಲ್ಲೂ ಕಾಂಗ್ರೆಸ್ ಅಧಿಕಾರಕ್ಕೆ ಬರುವ ಮೂಲಕ ದಕ್ಷಿಣ ಭಾರತದಲ್ಲಿ ಹಿಡಿತ ಹೆಚ್ಚಿಸಿಕೊಂಡಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್‌ಅವರ ಸಂಘಟಿತ ಕೆಲಸಕ್ಕೆ ಸಂದ ಗೆಲುವು ಆಗಿದ್ದು, ಕಾರ್ಯಕರ್ತರಿಗೆ ಹೊಸ ಹುರುಪು ನೀಡಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಚನ್ನಬಸಯ್ಯ ನಿಧನ



ಹೊಸದುರ್ಗ: ನಗರದ ವೀರಭದ್ರಸ್ವಾಮಿ ದೇವಾಲಯದ ಪ್ರಧಾನ ಅರ್ಚಕರಾದ ಶ್ರೀ ಚನ್ನಬಸಯ್ಯ (86) ವಯೋ ಸಹಜ ಕಾಯಿಲೆಯಿಂದ ಮೃತಪಟ್ಟಿದ್ದು ಮೃತರಿಗೆ ಪತ್ನಿ ಗೌರಮ್ಮ, ಉಪನ್ಯಾಸಕ ಡಿ.ಎಂ.ಕುಮಾರ್ ಸೇರಿ ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿಯನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಗರದ ಜಂಗಮ ನಗರದ ವೀರಶೈವ ರುದ್ರಭೂಮಿಯಲ್ಲಿ ವೀರಶೈವ ಸಂಪ್ರದಾಯದಂತೆ ನೆರವೇರಿತು.

10ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಚಿತ್ರದುರ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರು ಸಂಯುಕ್ತಾಶ್ರಯದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಮಾರಂಭ ಮೇ 10ರಂದು ಬೆಳಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್‌ಉದ್ಘಾಟನೆ ನೆರವೇರಿಸುವರು. ಶಾಸಕರಾದ ಟಿ.ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಸಂಸದ ಗೋವಿಂದ ಎಂ.ಕಾರಜೋಳ ಘನ ಉಪಸ್ಥಿತಿ ವಹಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ ಭಾಗವಹಿಸುವರು ಎಂದು ಡಾ.ಬಿ.ಎಂ.ಗುರುನಾಥ ತಿಳಿಸಿದ್ದಾರೆ.



ಚಿತ್ರದುರ್ಗದಲ್ಲಿ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವಕ್ಕೆ ಸ್ವಾಗತ ಸಮಿತಿಯ ಅಧ್ಯಕ್ಷ ಸಂಸದ ಗೋವಿಂದ ಕಾರಜೋಳ ಅವರು ಸಾಣೇಹಳ್ಳಿ ತರಳಬಾಳು ಮಠಕ್ಕೆ ಭೇಟಿ ನೀಡಿ ಶ್ರೀ ಪಂಡಿತಾರಾಧ್ಯ ಸ್ವಾಮೀಜಿಯವರನ್ನು ಆಮಂತ್ರಿಸಿದರು. ಈ ವೇಳೆ ಮಂಡಲ ಅಧ್ಯಕ್ಷ ಅಣ್ಣಪ್ಪ, ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಕೆ.ಎಸ್.ಕಲ್ಮಠ್ ಸೇರಿದಂತೆ ಬಿಜೆಪಿ ಮುಖಂಡು ಹಾಜರಿದ್ದರು.



ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ಸ್ವಾಗತ ಸಮಿತಿಯ ಅಧ್ಯಕ್ಷ ಸಂಸದ ಗೋವಿಂದ ಕಾರಜೋಳ ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡಿ ಶ್ರೀ ಶಾಂತವೀರ ಸ್ವಾಮೀಜಿಯವರನ್ನು ಆಮಂತ್ರಿಸಿದರು. ಈ ವೇಳೆ ಮಂಡಲ ಅಧ್ಯಕ್ಷ ಅಣ್ಣಪ್ಪ, ಬಿಜೆಪಿ ರಾಜ್ಯ ಕಾರ್ಯಕಾರಿಣೀ ಸದಸ್ಯ ಕೆ.ಎಸ್.ಕಲ್ಮಠ್ ಸೇರಿ ಮುಖಂಡರು ಹಾಜರಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

ಚಿತ್ರದುರ್ಗ: ಜಿಲ್ಲಾ ಒಕ್ಕಲಿಗರ ಸಂಘದ ವತಿಯಿಂದ ಪ್ರತಿಭಾವಂತ ಒಕ್ಕಲಿಗ ಮತ್ತು ಕುಂಚಿಟಿಗ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. 2025-26ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ದ್ವಿತೀಯ ಪಿಯುಸಿ ಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿರುವ ಒಕ್ಕಲಿಗ ಅಥವಾ ಕುಂಚಿಟಿಗ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳು ಸ್ವಯಂ ದೃಢೀಕೃತ ಅರ್ಜಿಯೊಂದಿಗೆ ಅಂಕಪಟ್ಟಿ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ವರ್ಗಾವಣೆ ಪತ್ರ, ಇತ್ತೀಚಿನ ಎರಡು ಪಾಸ್‌ಪೋರ್ಟ್ ಅಳತೆಯ ಫೋಟೋದೊಂದಿಗೆ ಪೋಷಕರ ಹೆಸರು ಮತ್ತು ವಿಳಾಸ, ಮೊಬೈಲ್ ಸಂಖ್ಯೆಯನ್ನು ಕಡ್ಡಾಯ ವಾಗಿ ನಮೂದಿಸಿ ಮೇ 25ರ ಒಳಗಾಗಿ ಚಿತ್ರದುರ್ಗ ಜಿಲ್ಲಾ ಒಕ್ಕಲಿಗರ ಸಂಘ, ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಎದುರು, ಬಿ.ಡಿ ರಸ್ತೆ ಚಿತ್ರದುರ್ಗ- 577501 ಈ ವಿಳಾಸಕ್ಕೆ ಖುದ್ದಾಗಿಯಾಗಲಿ ಅಥವಾ ಅಂಚೆ ಮೂಲಕವಾಗಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಎಸ್.ಈರಣ್ಣ, ಅಧ್ಯಕ್ಷ ಜಿ.ಪಿ. ಚೇತನ್, ಪ್ರಧಾನ ಕಾರ್ಯದರ್ಶಿ ಎಸ್.ಜಗನ್ನಾಥ್ ತಿಳಿಸಿದ್ದಾರೆ. ನಿಗ ಧಿತ ಸಮಯದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಮಾಹಿತಿಗಾಗಿ ಮೊ: 94485 67131, 9141777779, 9448697045, 9980278204, 9448665133, 9916420698ಗೆ ಸಂಪರ್ಕಿಸಬಹುದು.

ಹಿರಿಯೂರು ರಾಜಕೀಯಕ್ಕೆ ಪೂರ್ಣಿಮಾ ರೀ ಎಂಟ್ರಿ?

ಸುದ್ದಿಗೋಷ್ಠಿ ಕರೆದು ಮಹಿಳಾ ಮೀಸಲಾತಿ ಪ್ರಸ್ತಾಪಿಸಿದ ಪೂರ್ಣಿಮಾ | ಕಳೆದ ಚುನಾವಣೆಯಲ್ಲಿ ಸುಧಾಕರ್ ಎದುರು ಸೋಲು

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಸಚಿವಡಿ.ಸುಧಾಕರ್‌ಅನಾರೋಗ್ಯ ಚಿತ್ರದುರ್ಗಜಿಲ್ಲೆ ರಾಜಕೀಯ ವಲಯದಲ್ಲಿ ಕೆಲ ಸಂಚಲನಗಳ ಮೂಡಿಸಿದೆ. ಅದರಲ್ಲೂ ಹಿರಿಯೂರು ವಿಧಾನಸಭೆ ಕ್ಷೇತ್ರದಲ್ಲಿ ಗುಂಪು ಸಭೆಗಳಾಗುತ್ತಿವೆ. ಮಾಜಿ ಶಾಸಕಿ ಪೂರ್ಣಿಮಾಇದ್ದಕ್ಕಿದ್ದಂತೆಗುರುವಾರಚಿತ್ರದುರ್ಗದಲ್ಲಿ ಸುದ್ದಿಗೋಷ್ಠಿ ನಡೆಸುವುದರ ಮೂಲಕ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದ್ದಾರೆ. ಸುದ್ದಿಗೋಷ್ಠಿ ನಡೆಸಲು ಸದ್ಯಕ್ಕೆ ಯಾವುದೇ ಕಾರಣಗಳಿಲ್ಲದಿದ್ದರೂ ಮಹಿಳಾ ಮೀಸಲಾತಿ ಮುಂದಿಟ್ಟುಕೊಂಡು ನಾಲ್ಕು ಮಾತನಾಡಿದ್ದಾರೆ.

ಕಳೆದವಿಧಾನಸಭೆಚುನಾವಣೆಯಲ್ಲಿಹಿರಿಯೂರು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸುಧಾಕರ್ ಎದುರು ಸೋತ ನಂತರ ಕಾಂಗ್ರೆಸ್‌ಗೆ ಸೇರ್ಪಡೆಯಾಗಿದ್ದರು. ವಿಪ ಚುನಾವಣೆಯಲ್ಲಿ ತಮ್ಮ ಪತಿಶ್ರೀನಿವಾಸ್‌ಪರಕೆಲಸಮಾಡಿದ್ದರು. ನಂತರದಲ್ಲಿ ಅಷ್ಟಾಗಿ ಕಾಣಿಸಿಕೊಂಡಿದ್ದಿಲ್ಲ. ಈಗ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಸುದ್ದಿಗೋಷ್ಠಿ ನಡೆಸುವುದರ ಮೂಲಕ ಚರ್ಚೆಗೆ ಆಹಾರವಾಗಿದ್ದಾರೆ.



ಚಿತ್ರದುರ್ಗದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಮಾತನಾಡಿದರು.

ಮಹಿಳಾ ಮೀಸಲು ಸಂಬಂಧಿಸಿದಂತೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಲೋಕಸಭೆಯಲ್ಲಿ ಮಂಡನೆಯಾದ ಮಹಿಳೆಯರ ಶೇ.33ರಷ್ಟು ಮೀಸಲಾತಿ ನೀಡುವ ನಾರಿಶಕ್ತಿ ವಂದನ್ ವಿಧೇಯಕವನ್ನು ನಾವು ವಿರೋಧಿಸುತ್ತಿಲ್ಲ. ಅದರ ಹಿಂದಿನ ಷಡ್ಯಂತ್ರವನ್ನಷ್ಟೇ ವಿರೋಧಿಸುತ್ತಿದ್ದೇವೆ ಎಂದರು. ಬಿಜೆಪಿಯವರು ದೂರದೃಷ್ಟಿಯಿಲ್ಲದೆ ಮಹಿಳಾ ಮೀಸಲಾತಿ ಮಂಡನೆ ಮಾಡಿರುವುದು ಸರಿಯಲ್ಲ. ಇದರಲ್ಲಿನ ಲೋಪದೋಷದ ಬಗ್ಗೆ ಜನಜಾಗೃತಿ ಅಗತ್ಯವಾಗಿದೆ.

ವಿರೋಧ ಪಕ್ಷದವರಿಗೆ ಚರ್ಚೆಗೆ ಅವಕಾಶ ನೀಡದೆ ಏಕಾಏಕಿ ಮಂಡನೆ ಮಾಡಿದ್ದು ಯಾವ ನ್ಯಾಯ? ಶೇ.33 ಮೀಸಲಾತಿ ಬಿಲ್ ಮಾತ್ರವೇ ಪಾಸ್ ಮಾಡಬೇಕಾಗಿತ್ತು. ಅದನ್ನು ಬಿಟ್ಟು ಕ್ಷೇತ್ರ ಪುನರ್‌ವಿಂಗಡಣೆ ಅಗತ್ಯವಿರಲಿಲ್ಲ. ಈಗ ಇರುವ 534 ಸ್ಥಾನಗಳಲ್ಲೇ ಮೊದಲು ಶೇ.33ರಷ್ಟು ಮೀಸಲಾತಿಯ ಅವಕಾಶ ನೀಡಲಿ. ಅದನ್ನು ಬಿಟ್ಟು ಸಂಖ್ಯೆ ಏರಿಕೆ ಅಗತ್ಯವಿಲ್ಲ. ಶಾಸಕಾಂಗಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯ ಅನುಷ್ಠಾನವನ್ನು ಹೊಸ ಜನಗಣತಿ ಪೂರ್ಣಗೊಳಿಸಿ ನಂತರ ಡಿಲಿಮಿ ಟೇಶನ್ ಬಗ್ಗೆ ಚರ್ಚಿಸಿ, ಅನುಷ್ಠಾನಗೊಳಿಸಲಿ. ಅದನ್ನು ಬಿಟ್ಟು ವಿನಾಕಾರಣ ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ ಎಂದು ಹೇಳಿದರು. ಈಗಾಗಲೇ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಮಸೂದೆ ಮನಮೋಹನ್ ಸಿಂಗ್‌ರವರು ಪ್ರಧಾನಮಂತ್ರಿಯಾಗಿದ್ದಾಗ 2010ರಲ್ಲಿ ಮಂಡನೆಯಾಗಿ ರಾಜ್ಯಸಭೆ ಯಲ್ಲಿ ಇದಕ್ಕೆ ಅನುಮೋದನೆ ದೊರಕಿತ್ತು. ಲೋಕಸಭೆಯಲ್ಲಿ ಒಮ್ಮತದ ಕೊರತೆ ಮತ್ತು ಮತದಾನವಾಗದ ಕಾರಣ, ಈ ಮಸೂದೆ ಅಂಗೀಕಾರವಾಗದೆ ಉಳಿಯಿತು. ಇದು ಎಲ್ಲರಿಗೂ ಗೊತ್ತಿರುವ ಸತ್ಯ ಎಂದರು. ಈ ವೇಳೆ ರಾಷ್ಟ್ರೀಯ ಯುವ ಕಾಂಗ್ರೆಸ್ ಸಮಿತಿ ಮುಖಂಡರಾದ ಸುಮಯ್ಯ ತಬ್ರಿಜ್, ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ ತಾಜ್‌ಪೀರ್‌ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಡಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಪಿ.ಸಂಪತ್‌ಕುಮಾರ್, ಮೈಲಾರಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾನಂದಿನಿಗೌಡ, ನಗರಸಭೆ ಮಾಜಿ ಸದಸ್ಯೆ ಮೀನಾಕ್ಷಿ, ಶಶಿಕಲಾ ಸುರೇಶ್ ಬಾಬು, ಸವಿತಾ ರಘು, ಮೋಕ್ಷಾ ರುದ್ರಸ್ವಾಮಿ, ಮೆಹಬೂಬ ಖಾತೂನ್, ರುದ್ರಾಣಿ ಗಂಗಾಧರ್, ವೆಂಕಟೇಶ್, ಲಕ್ಷ್ಮೀಕಾಂತ್ ಉಪಸ್ಥಿತರಿದ್ದರು.

ಅಭಿಮಾನೋತ್ಸವ: ನಾಯಕ ಮುಖಂಡರಿಗೆ ತಿಪ್ಪಾರೆಡ್ಡಿ ಆಹ್ವಾನ

ಕನಕ ವೃತ್ತದಿಂದ ಬಿಎಸ್‌ವೈ ಅದ್ದೂರಿ ಮೆರವಣಿಗೆ | 25ಕ್ಕೂ ಹೆಚ್ಚು ಕಲಾ ತಂಡಗಳು ಭಾಗಿ

• **ಕನ್ನಡಪ್ರಭ ವಾರ್ತೆ ಚಿತ್ರದುರ್ಗ**

ರೈತ ನಾಯಕ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರಿಗೆ ಮೇ 9ರಂದು ಮಾದಾರ ಚನ್ನಯ್ಯ ಗುರುಪೀಠದಬಳಿ ವಿಶಾಲವಾದಮೈದಾನದಲ್ಲಿ ಹಮ್ಮಿಕೊಳ್ಳಲಾಗಿರುವ ಅಭಿಮಾನೋತ್ಸವಕ್ಕೆ ನಾಯಕ ಸಮಾಜದ ಮುಖಂಡರನ್ನು ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಆಹ್ವಾನಿಸಿದರು.

ಪ್ರವಾಸಿ ಮಂದಿರದಲ್ಲಿ ನಾಯಕ ಸಮಾಜದ ಅಧ್ಯಕ್ಷ ಎಚ್.ಜೆ.ಕೃಷ್ಣಮೂರ್ತಿ ಮತ್ತಿತರರಿಗೆ ಆಹ್ವಾನ ಪತ್ರಿಕೆ ನೀಡಿ ಮಾತನಾಡಿದ ಅವರು, ಜಿ.ಎಚ್.ತಿಪ್ಪಾರೆಡ್ಡಿ, ಮೇ.8ರಂದು ಸಂಜೆ ಕನಕ ವೃತ್ತದಿಂದ ಬಿ.ಎಸ್.ಯಡಿಯೂರಪ್ಪನವರನ್ನು ಅದ್ದೂರಿ ಮೆರವಣಿಗೆ ಮೂಲಕ ಬರಮಾಡಿಕೊಳ್ಳಲಾಗುವುದು. 25ಕ್ಕೂ ಹೆಚ್ಚು ಕಲಾ ತಂಡಗಳು ಪಾಲ್ಗೊಳ್ಳಲಿವೆ. ಐನೂರಕ್ಕೂ ಹೆಚ್ಚು ಮಹಿಳೆಯರು ಪೂರ್ಣಕುಂಭ ಹೊತ್ತು ಸ್ವಾಗತಿಸುವರು. ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳುವವರಿಗೆ ಯಾವುದೇ



ಮುಖಂಡರಿಗೆ ತಿಪ್ಪಾರೆಡ್ಡಿ ಆಹ್ವಾನ ಪತ್ರಿಕೆ ನೀಡಿದರು.

ರೀತಿಯ ತೊಂದರೆಯಾಗದಂತೆ ತಿಂಡಿ, ಊಟದ ವ್ಯವಸ್ಥೆ ಮಾಡಲಾಗುವುದು. ನಾಯಕ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ ಎಂದು ಮನವಿ ಮಾಡಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಸರ್ಕಾರದ ವತಿಯಿಂದ ವಾಲ್ಮೀಕಿ ಜಯಂತಿಯನ್ನು ಘೋಷಿಸಿದರು. ಅದರಿಂದ ನಾಯಕ ಸಮಾಜ ಸಂಘಟನೆಯಾಗಲು ಅವಕಾಶ ಸಿಕ್ಕಂತಾಯಿತು. ಎಸ್‌ಸಿಪಿ, ಟಿಎಸ್‌ಪಿ ಯೋಜನೆಗೆ ಹೆಚ್ಚಿನ ಅನುದಾನ ಮಂಜೂರು ಮಾಡಿದರು. ಮದಕರಿನಾಯಕ ಆಳಿದ ನಾಡು ಚಿತ್ರದುರ್ಗದಲ್ಲಿ ಥೀಂ ಪಾರ್ಕ್ ನಿರ್ಮಾಣ ಮಾಡುವುದಾಗಿ ಅಮಿತ್ ಶಾ ಚಿತ್ರದುರ್ಗಕ್ಕೆ ಬಂದಾಗ ಭರವಸೆ ನೀಡಿ ಹೋಗಿದ್ದರು.

ಇದುವರೆವಿಗೂ ಆಗಿಲ್ಲ. ಮೇ9ರ ಅಭಿಮಾನೋತ್ಸವಕ್ಕೆ ಆಗಮಿಸುತ್ತಿರುವುದರಿಂದ ಮತ್ತೊಮ್ಮೆ ಥೀಂ ಪಾರ್ಕ್ ನಿರ್ಮಾಣಕ್ಕೆ ಮನವಿ ಅರ್ಪಿಸಲಾಗುವುದು. ವಾಲ್ಮೀಕಿ ಸಮಾಜದವರು ದೊಡ್ಡ ಸಂಖ್ಯೆಯಲ್ಲಿ ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವದಲ್ಲಿ ಭಾಗವಹಿಸುವಂತೆ ವಿನಂತಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸಿದ್ಧಾರ್ಥ ಗುಂಡಾರ್ಪಿ, ನಗರಸಭೆ ಮಾಜಿ ಸದಸ್ಯ ವೆಂಕಟೇಶ್, ಬಾಲೇನಹಳ್ಳಿ ತಿಪ್ಪೇಸ್ವಾಮಿ, ಕವನ, ಯುವ ನ್ಯಾಯವಾದಿ ಅಶೋಕ್ ಬೆಳಗಟ್ಟ, ಪ್ರಶಾಂತ್ ಕೂಲಿಕಾರ್, ಓಬಳೇಶ್, ಸೋಮೇಂದ್ರ ಇನ್ನು ಅನೇಕರು ಉಪಸ್ಥಿತರಿದ್ದರು.

ಸಾಣೇಹಳ್ಳಿ ಮಠಕ್ಕೆ ರೈತರಿಂದ ದವಸ-ಧಾನ್ಯ ಸಮರ್ಪಣೆ



ತರೀಕೆರೆ ತಾಲೂಕಿನ ಲಿಂಗದಹಳ್ಳಿಯ ಭಕ್ತಾದಿಗಳು ಸಾಣೇಹಳ್ಳಿ ಶ್ರೀಮಠಕ್ಕೆ ದವಸ-ಧಾನ್ಯಗಳನ್ನು ಸಮರ್ಪಿಸಿ ಶ್ರೀಗಳ ಆಶೀರ್ವಾಧ ಪಡೆದರು.

• **ಕನ್ನಡಪ್ರಭ ವಾರ್ತೆ** ಹೊಸದುರ್ಗ

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಲಿಂಗದಹಳ್ಳಿ ಗ್ರಾಮದ ಭಕ್ತಾದಿಗಳು ಸಾಣೇಹಳ್ಳಿ ಶ್ರೀಮಠದ ನಿತ್ಯ ದಾಸೋಹ ಹಾಗೂ ವಿದ್ಯಾರ್ಥಿ ನಿಲಯದ ಬಳಕೆಗಾಗಿ ವಿವಿಧ ದವಸ-ಧಾನ್ಯಗಳನ್ನು ಗುರುವಾರ ಮಠಕ್ಕೆ ಸಮರ್ಪಿಸಿದರು.

9 ಕ್ವಿಂಟಲ್ ಅಕ್ಕಿ, 40 ಕೆಜಿ ಬೆಲ್ಲ, 5ಕೆಜಿ ಒಣ ಮೆಣಸಿನಕಾಯಿ, 5 ಕೆಜಿ ಖಾರದಪುಡಿ ಸೇರಿದಂತೆ ವಿವಿಧ ದಿನಸಿ ಸಾಮಗ್ರಿಗಳನ್ನು ಶ್ರೀ ಮಠಕ್ಕೆ ಅರ್ಪಿಸಿ, ಶ್ರೀ ಪಂಡಿತಾರಾಧ್ಯ ಸ್ವಾಮೀಜಿಯವರಆಶೀರ್ವಾದಪಡೆದರು.

ಈ ವೇಳೆ ಮಾತನಾಡಿದ ಶ್ರೀಗಳು, ಭಕ್ತಾದಿಗಳು ಕಾಯಕ ಮತ್ತು ದಾಸೋಹ ಪ್ರಜ್ಞೆಯನ್ನು ಮೈಗೂಡಿಸಿಕೊಂಡಿರುವುದು ಶ್ಲಾಘನೀಯ. ಇಂತಹ ಸತ್ಕಾರ್ಯಗಳಿಂದ ಧರ್ಮದ ದಾರಿಯಲ್ಲಿ ನಡೆದು ಆದರ್ಶ ವ್ಯಕ್ತಿತ್ವರೂಢಿಸಿಕೊಳ್ಳಲುಸಾಧ್ಯವಾಗುತ್ತದೆ. ವ್ಯಕ್ತಿ ಪರಿಶುದ್ಧವಾಗಿದ್ದರೆ ಸಮಾಜವೂ ಶುದ್ಧವಾಗುತ್ತದೆ ಎಂದರು.

ಹಿರಿಯರು ಕಿರಿಯರಿಗೆ ಮಾರ್ಗದರ್ಶಕರಾಗುವಮೂಲಕಮನಸ್ಸು, ಮನೆ ಹಾಗೂ ಸಮಾಜದ ಸುಧಾರಣೆಗೆ ಶ್ರಮಿಸಬೇಕು. ನೀವೆಲ್ಲರು ಸಂಸ್ಕೃತಿ, ಕಲೆ, ಸಾಹಿತ್ಯ ಮತ್ತು ಸಂಗೀತದ ಬಗ್ಗೆ ಒಲವು ಬೆಳೆಸಿಕೊಂಡು ಸುಸಂಸ್ಕೃತ ಜೀವನ ನಡೆಸಬೇಕು.

ಶಿಕ್ಷಣ ಮತ್ತು ದಾಸೋಹಕ್ಕೆ ನೀಡುವ ಈ ಸದ್ಭಾವನೆಗಳುಇತರರಿಗೂಮಾದರಿಯಾಗಲಿ ಎಂದು ಶ್ರೀಗಳು ಹಾರೈಸಿದರು. ಈ ಸಂದರ್ಭದಲ್ಲಿ ಲಿಂಗದಹಳ್ಳಿ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

ರೈಲ್ವೆ ಸಿಗ್ನಲ್ ಕೇಬಲ್ ಕಳವು: ಆರೋಪಿಗಳ ಬಂಧನ

ಖಚಿತ ಮಾಹಿತಿ ಮೇರೆಗೆ ಆರ್.ಪಿ.ಎಫ್ ಮೈಸೂರು ಘಟಕದ ಸಿಬ್ಬಂದಿ ಕಾರ್ಯಾಚರಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ರೈಲ್ವೆ ಸಿಗ್ನಲ್ ಕೇಬಲ್ ಕಳವು ಮಾಡಿದ್ದ ಇಬ್ಬರು ಆರೋಪಿಗಳನ್ನು ಬಂಧಿಸಿರುವ ರೈಲ್ವೆ ಸಂರಕ್ಷಣಾ ಪಡೆ (ಆರ್.ಪಿ.ಎಫ್) ಮೈಸೂರು ಘಟಕದ ಸಿಬ್ಬಂದಿ, ಕಳವಾದ ರೈಲ್ವೆ ಆಸ್ತಿಯನ್ನು ವಶಪಡಿಸಿಕೊಂಡಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ನಿವಾಸಿಗಳಾದ ರಘು (23) ಮತ್ತು ತಿಪ್ಪಣ್ಣ (55) ಎಂಬವರೇ ಬಂಧಿತ ಆರೋಪಿಗಳು. ಖಚಿತ ಮಾಹಿತಿ ಮೇರೆಗೆ ಆರ್.ಪಿ.ಎಫ್ ಸಿಬ್ಬಂದಿ ಅಶೋಕಪುರಂ ಮತ್ತು ಕಡಕೊಳ ರೈಲು ನಿಲ್ದಾಣಗಳ ಮಧ್ಯೆ ನಿಗಾವಹಿಸಿ ಮಂಗಳವಾರ ಕಾರ್ಯಾಚರಣೆ ನಡೆಸಿದರು. ಈ ವೇಳೆ ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ ಇಬ್ಬರನ್ನು ತಡೆದು ವಿಚಾರಣೆಗೆ ಒಳಪಡಿಸಿದ್ದರು.

ಆರೋಪಿಗಳು ಸುಮಾರು ಒಂದು ತಿಂಗಳ ಹಿಂದೆ ರೈಲ್ವೆ ಸಿಗ್ನಲ್ ಕೇಬಲ್ ಸುಮಾರು 15 ಮೀಟರ್‌ಕಳವು ಮಾಡಿರುವುದಾಗಿ ಒಪ್ಪಿಕೊಂಡರು. ಘಟನೆಯ ಸಂದರ್ಭದಲ್ಲಿ ಆರೋಪಿಗಳು ರಾಜ್ಯ ನೀರಿನ ಪೈಪ್‌ಲೈನ್ ಕಾಮಗಾರಿಯಲ್ಲಿ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು ಹಾಗೂ ಗುಂಡಿ ಅಗೆಯುವ ವೇಳೆ ಹೊರಬಿದ್ದ ರೈಲ್ವೆ ಕೇಬಲ್ ಗಳನ್ನು ಗಮನಿಸಿ, ಮುಂಜಾನೆ ಸಮಯದಲ್ಲಿ ಕೇಬಲ್ ಕಳವು ಮಾಡಿ, ಶ್ರೀನಗರ ಲೇಔಟ್ ಪ್ರದೇಶಕ್ಕೆ ಸಾಗಿಸಿ, ತಾಮ್ರವನ್ನು ಪಡೆಯಲು ಅದನ್ನು ಸುಟ್ಟು ಮಾರಾಟ ಮಾಡಿರುವುದಾಗಿ ಆರೋಪಿಗಳು ಒಪ್ಪಿಕೊಂಡಿದ್ದಾರೆ. ಆರೋಪಿಗಳ ಸ್ವಯಂ ಹೇಳಿಕೆ ಆಧಾರದ ಮೇಲೆ ಸ್ಥಳ ಪರಿಶೀಲಿಸಿದಾಗ ಸುಟ್ಟ ಕೇಬಲ್ ಅವಶೇಷಗಳು ಮತ್ತು ಪ್ಲಾಸ್ಟಿಕ್ ಚೀಲದಲ್ಲಿ ಮರೆಮಾಡಿದ್ದ ಸುಮಾರು 5 ಕೆ.ಜಿ. ತಾಮ್ರ ತಂತಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ನೈಋತ್ಯ ರೈಲ್ವೆ ಮೈಸೂರು ವಿಭಾಗದ ವಿಭಾಗೀಯ ಹಣಕಾಸು ವ್ಯವಸ್ಥಾಪಕ ಪೃಥ್ವಿ ಎಸ್. ಹುಲ್ಲತ್ತಿ ತಿಳಿಸಿದ್ದಾರೆ.



ಆರೋಗ್ಯಕಾಳಜಿ | ಎಚ್.ಎಸ್.ಸುಂದರ್‌ರಾಜ್ ಅಭಿಮತ | ಉಚಿತ ಕಣ್ಣಿನ ತಪಾಸಣೆ, ಉಚಿತ ಶಸ್ತ್ರ ಚಿಕಿತ್ಸಾ ಶಿಬಿರ

ಕಣ್ಣಿನ ಆರೋಗ್ಯಕ್ಕಾಗಿ ವೈದ್ಯರ ಸಲಹೆ ಅತೀ ಮುಖ್ಯ

• **ಕನ್ನಡಪ್ರಭ ವಾರ್ತೆ** ಹಿರಿಯೂರು

ನಗರದಲ್ಲಿರೆಡ್‌ಕ್ರಾಸ್‌ಹಾಗೂರೋಟರಿಸಂಸ್ಥೆವತಿಯಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಉಚಿತ ಕಣ್ಣಿನ ತಪಾಸಣೆ ಮತ್ತು ಉಚಿತ ಶಸ್ತ್ರ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು ವೈದ್ಯರು ನೀಡುವ ಸಲಹೆ ಸೂಚನೆಗಳನ್ನು ತಪ್ಪದೇ ಪಾಲಿಸುವ ಮೂಲಕ ನಿಮ್ಮ ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ರೆಡ್ ಕ್ರಾಸ್ ಚೇರ್ಮನ್ ಎಚ್.ಎಸ್.ಸುಂದರ್‌ರಾಜ್ ಹೇಳಿದರು.

ನಗರದ ರೋಟರಿ ಸಭಾಭವನದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೋಟರಿ ಸಂಸ್ಥೆ, ಸರ್ವೋದಯ ಬ್ರಹ್ಮಜ್ಞಾನ ಸಮಾಜ, ಲಯನ್ಸ್ ಐ ಹಾಸ್ಪಿಟಲ್ ಬೆಂಗಳೂರು, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಮತ್ತು ಜಿಲ್ಲಾ ಅಂಧತ್ವ ನಿವಾರಣಾ ಸಮಿತಿಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಕಣ್ಣಿನ ತಪಾಸಣೆ ಮತ್ತು ಉಚಿತ ಶಸ್ತ್ರ ಚಿಕಿತ್ಸಾ ಶಿಬಿರ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಶಸ್ತ್ರಚಿಕಿತ್ಸೆ ಅಗತ್ಯವಿರುವ ಶಿಬಿರಾರ್ಥಿಗಳಿಗೆ ಯಾವುದೇ ಹಣವನ್ನು ಪಡೆಯದೇ ದಾನಿಗಳ ಸಹಕಾರದಿಂದ ಉಚಿತ ಶಸ್ತ್ರ ಚಿಕಿತ್ಸೆ ನೀಡಲಾಗುತ್ತಿದ್ದು ಶಸ್ತ್ರ ಚಿಕಿತ್ಸೆಗೆ ಒಳಪಡುವ ಶಿಬಿರಾರ್ಥಿಗಳು ಯಾವುದೇ ಕಾರಣಕ್ಕೂ ಹೊರಗೆ ಹೋಗದೇ ವೈದ್ಯರ ಮಾರ್ಗದರ್ಶನದಂತೆ ನಡೆದುಕೊಳ್ಳಬೇಕು. ವೈದ್ಯರ ಮಾತನ್ನು ಮೀರಿದರೆ ಮುಂದೆ ಆಗುವ ಅನಾಹುತಗಳಿಗೆ ನಾವು ಜವಾಬ್ದಾರರಾಗಿ ರುವುದಿಲ್ಲ ಎಂದರು.



ಹಿರಿಯೂರು ನಗರದ ರೋಟರಿ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಕಣ್ಣಿನ ತಪಾಸಣೆ ಮತ್ತು ಉಚಿತ ಶಸ್ತ್ರಚಿಕಿತ್ಸಾ ಶಿಬಿರ ಕಾರ್ಯಕ್ರಮವನ್ನು ಎಚ್.ಎಸ್ ಸುಂದರ್‌ರಾಜ್ ಉದ್ಘಾಟಿಸಿದರು.

ಸಮಾಜ ಸೇವಕಿ ಶಶಿಕಲಾ ರವಿಶಂಕರ್‌ಮಾತನಾಡಿ, ಕಣ್ಣುಗಳು ನಮ್ಮ ದೇಹದ ಅವಿಭಾಜ್ಯ ಅಂಗವಾಗಿದ್ದು ಕಣ್ಣುಗಳಿಲ್ಲದೆ ಜೀವನ ನಡೆಸುವುದು ತುಂಬಾ ಕಷ್ಟ. ಈ ನಿಟ್ಟಿನಲ್ಲಿ ಸಾರ್ವಜನಿಕರ ಕಣ್ಣುಗಳ ರಕ್ಷಣೆಗಾಗಿ ನಮ್ಮ ರೆಡ್ ಕ್ರಾಸ್ ಹಾಗೂ ರೋಟರಿ ಸಂಸ್ಥೆಯಿಂದ ಬೆಂಗಳೂರಿನ ಲಯನ್ಸ್ ಐ ಹಾಸ್ಪಿಟಲ್ ನೆರವಿನೊಂದಿಗೆ ಉಚಿತ ಕಣ್ಣಿನ ತಪಾಸಣೆ ಮತ್ತು ಉಚಿತ ಶಸ್ತ್ರ ಚಿಕಿತ್ಸೆ ಮಾಡಲಾಗುತ್ತಿದೆ.

ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಒಳಪಡುವ ಶಿಬಿರಾರ್ಥಿಗಳ ವೈದ್ಯಕೀಯತಪಾಸಣೆಮಾಡಲಾಗುತ್ತದೆ. ಬಿಪಿ, ಶುಗರ್, ಹೃದಯ ತೊಂದರೆ ಕಂಡು ಬಂದಲ್ಲಿ ವೈದ್ಯರು ಶಸ್ತ್ರಚಿಕಿತ್ಸೆ ಮಾಡುವುದಿಲ್ಲ. ಏಕೆಂದರೆ ರೋಗಿಗಳ ಸುರಕ್ಷತೆ ವೈದ್ಯರಿಗೆ ಮುಖ್ಯವಾಗಿರುತ್ತದೆ.

ಹಾಗಾಗಿ ವೈದ್ಯರು ಶಸ್ತ್ರ ಚಿಕಿತ್ಸೆ ಮುಂದೂಡಿದರೆ ನೀವು ಕೋಪಮಾಡಿಕೊಳ್ಳದೇ ಅವರ ಸೂಚನೆಯಂತೆ ನಡೆದುಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಸುಮಾರು 75 ಜನರಿಗೆ ನೇತ್ರ ತಪಾಸಣೆ ನಡೆಸಿ 25 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಗೆ ಬೆಂಗಳೂರಿನ ಲಯನ್ಸ್ ಆಸ್ಪತ್ರೆಗೆ ಹೋಗಲು ಸೂಚನೆ ನೀಡಲಾಯಿತು.

ಈ ಸಂದರ್ಭದಲ್ಲಿ ರೆಡ್‌ಕ್ರಾಸ್ ವೈಸ್ ಚೇರ್ಮನ್ ಎ. ರಾಘವೇಂದ್ರ, ಕಾರ್ಯದರ್ಶಿ ಎಂ.ಎಸ್.ರಾಘವೇಂದ್ರ, ಎಲ್.ಆನಂದಶೆಟ್ಟಿ, ಸಣ್ಣಭೀಮಣ್ಣ, ಪಿ.ಆರ್.ಸತೀಶ್ ಬಾಬು, ನಾಗಸುಂದರಮ್ಮ ಸುಬ್ಬಣ್ಣಶೆಟ್ಟಿ, ಪಾರ್ವತಮ್ಮ, ಸೌಮ್ಯಸುರೇಶ್, ಶೋಭಾ ನಾಗರಾಜ್, ರೋಟರಿ ಕಾರ್ಯದರ್ಶಿ ವಿಕಾಸ್ ಜೈನ್, ಧನರಾಜ್ ಜೈನ್, ಹೆಚ್. ವೆಂಕಟೇಶ್ ಸೇರಿದಂತೆ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಜನರು ಉಚಿತ ಆರೋಗ್ಯ ತಪಾಸಣೆ ಶಿಬಿರದ ಸದುಪಯೋಗ ಪಡೆಯಲಿ

ಮೇಟಿಕುರ್ಕೆ ಆರೋಗ್ಯ ಶಿಬಿರದಲ್ಲಿ ಡಾ.ಪಾಲಾಕ್ಷಪ್ಪ ಸಲಹೆ



ಹಿರಿಯೂರಿನ ವೇದಾವತಿ ಕಾಲೇಜಿನಲ್ಲಿ ಆಯೋಜಿಸಲಾದ ವಾರ್ಷಿಕ ವಿಶೇಷ ರಾಷ್ಟ್ರೀಯ ಸೇವಾ ಯೋಜನೆ ಶಿಬಿರವನ್ನು ಡಾ.ಎಸ್.ಎಲ್.ಪಾಲಾಕ್ಷಪ್ಪ ಅವರು ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಹಿರಿಯೂರು

ನಗರದ ವೇದಾವತಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ 2025-26ನೇ ಸಾಲಿನವಾರ್ಷಿಕವಿಶೇಷರಾಷ್ಟ್ರೀಯಸೇವಾಯೋಜನೆ ಶಿಬಿರಕ್ಕೆ ತಾಲೂಕಿನ ಮೇಟಿಕುರ್ಕೆ ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಚಿತ್ರದುರ್ಗದಬಸವೇಶ್ವರವೈದ್ಯಕೀಯಮಹಾವಿದ್ಯಾಲಯದವೈದ್ಯಕೀಯಅಧೀಕ್ಷಕ ಡಾ.ಎಸ್.ಎಲ್.ಪಾಲಾಕ್ಷಪ್ಪನವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮೇಟಿಕುರ್ಕೆಯ ಗ್ರಾಮಸ್ಥರು ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಸದುಪಯೋಗ ಮಾಡಿಕೊಳ್ಳಬೇಕು. ಶಿಬಿರದಲ್ಲಿ ಎಲ್ಲರೂ ಹಾಜರಾಗುವ ಮೂಲಕ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ ಎಂದರು.

ನಿವೃತ್ತ ಪ್ರಾಂಶುಪಾಲರು ಹಾಗೂ ರಾಜ್ಯ ಪ್ರಶಸ್ತಿ ವಿಜೇತರಾದ ಡಾ.ಎಂ.ಶಿವಲಿಂಗಪ್ಪ ಮಾತನಾಡಿ, ಎನ್‌ಎಸ್‌ಎಸ್ ಶಿಬಿರಗಳ ಯಶಸ್ಸಿಗೆ ವಿದ್ಯಾರ್ಥಿಗಳ ಜೊತೆಗೆ ಗ್ರಾಮಸ್ಥರ ಪಾತ್ರವೂ ಮುಖ್ಯವಾದುದು. ಗ್ರಾಮಗಳ ಜನರ ಆರೋಗ್ಯ, ಸ್ವಚ್ಛತೆ ಬಗ್ಗೆ ಶಿಬಿರಗಳು ಹೆಚ್ಚಿನ ಕಾಳಜಿ ವಹಿಸುವುದರಿಂದ ಎಲ್ಲರೂ ಇಂತಹ ಕಾರ್ಯಕ್ರಮಗಳ ಯಶಸ್ಸಿಗೆ ಕೈಜೋಡಿಸಬೇಕು ಎಂದರು. ಉದ್ಘಾಟನೆಯ ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ.ಡಿ.ಆರ್.ಹನುಮಂತರಾಯ, ಪ್ರಾಧ್ಯಾಪಕ ಡಾ.ಎನ್.ಬಿ ಗಟ್ಟಿ, ಸ್ವಯಂ ಸೇವಕಿ ನೀತು ರಾಜು ಸೇರಿದಂತೆ ಶಿಬಿರಾಧಿಕಾರಿಗಳು, ವಿದ್ಯಾರ್ಥಿಗಳು, ಗ್ರಾಮಸ್ಥರು ಹಾಜರಿದ್ದರು.

ಸುದ್ದಿ ಸಿಂಚನ

ಭಾರಿ ಮಳೆಯಿಂದ 30 ಎಕರೆ ಭತ್ತ ನಾಶ



ಹರಿಹರ: ಬಹು ದಿನಗಳ ನಂತರ ನಗರ ಹಾಗೂ ತಾಲೂಕಿನ ಕುಣಿ ಬೆಳಕೆರೆಯಲ್ಲಿ ವ್ಯಾಪ್ತಿಯಲ್ಲಿ ಬುಧವಾರ ಭಾರೀ ಮಳೆ ಸುರಿದ ಪರಿಣಾಮ ಕುಣೆಬೆಳಕೆರೆಯಲ್ಲಿ 30 ಎಕರೆ ಭತ್ತದ ಬೆಳೆ ನಾಶವಾಗಿದ್ದು, ಸುಮಾರು 5 ಲಕ್ಷ ರು. ಹಾನಿಯಾಗಿದೆ. ತಹಸೀಲ್ದಾರ್‌ಜೆ.ಸಂತೋಷ ಕುಮಾರ್ ಪರಿಶೀಲನೆ ನಡೆಸಿದರು. ಕಳೆದ ಅನೇಕ ದಿನಗಳಿಂದ ಮಳೆ ಕಾಣದೆ ಕಾದ ಕಬ್ಬಿಣದಂತಾಗಿದ್ದ ಹರಿಹರ ನಗರಾದ್ಯಂತ ರಾತ್ರಿ ಸುರಿದ 5.2 ಮಿ.ಮೀ ಮಳೆಯಿಂದ ತಂಪಾಗಿದ್ದು, ಆಹ್ಲಾದಕರ ವಾತಾವರಣ ಮೂಡಿದೆ.

11ರಿಂದ ಓಶೋ ಧ್ಯಾನ ಶಿಬಿರ

ದಾವಣಗೆರೆ: ಓಶೋ ಸನ್ನಿಧಿ ಇನ್‌ಸೈಟ್ ಫೌಂಡೇಶನ್ ವತಿಯಿಂದ ಮೇ 11ರಿಂದ 17ರವರೆಗೆ ಓಶೋ ಧ್ಯಾನ ಶಿಬಿರವನ್ನು ಇಲ್ಲಿನ ಎವಿಕೆ ಕಾಲೇಜು ರಸ್ತೆಯಲ್ಲಿರುವ ಆಲೂರು ಕನ್ವೆನ್ಷನ್ ಹಾಲ್ ನಲ್ಲಿ ಆಯೋಜಿಸಲಾಗಿದೆ. ಪ್ರತಿದಿನ ಬೆಳಿಗ್ಗೆ 6 ರಿಂದ 7.30ರ ವರೆಗೆ ಶಿಬಿರ ನಡೆಯಲಿದ್ದು, ಆಸಕ್ತರು ಹೆಚ್ಚಿನ ಮಾಹಿತಿ ಮತ್ತು ನೋಂದಣಿಗೆ 9738572318, 90367 19573 ಸಂಪರ್ಕಿಸಲು ಫೌಂಡೇಶನ್ ಅಧ್ಯಕ್ಷರು ತಿಳಿಸಿದ್ದಾರೆ.

ಶತಾಯುಷಿ ವೀರಪ್ಪ ನಿಂಗಪ್ಪ ಪಾಳೇದ ನಿಧನ

ದಾವಣಗೆರೆ: ದಾವಣಗೆರೆ ವಿಶ್ವವಿದ್ಯಾಲಯ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ



ಪ್ರೊ.ಅಶೋಕಕುಮಾರ ಪಾಳೇದ ಅವರ ತಂದೆ ಶತಾಯುಷಿ ವೀರಪ್ಪ ನಿಂಗಪ್ಪ ಪಾಳೇದ ಗುರುವಾರ ನಿಧನರಾಗಿದ್ದಾರೆ. ಅವರಿಗೆ 100 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆ ಹಾವೇರಿ ಜಿಲ್ಲೆ ರಟ್ಟೀಹಳ್ಳಿ ತಾಲ್ಲೂಕು ಹಳ್ಳಿಯಾಳ ಗ್ರಾಮದಲ್ಲಿ ಮೇ 8ರ ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದೆ ಎಂದು ಕುಟುಂಬ ತಿಳಿಸಿದೆ. **ಸಂತಾಪ:** ಮೃತರಿಗೆ ದಾವಣಗೆರೆ ವಿವಿ ಕುಲಪತಿ ಪ್ರೊ.ಬಿ.ಡಿ.ಕುಂಬಾರ, ಕುಲಸಚಿವ ಎಸ್.ಬಿ.ಗಂಟಿ, ಪರೀಕ್ಷಾಂಗ ಕುಲಸಚಿವ ಪ್ರೊ. ಸಿ.ಕೆ. ರಮೇಶ, ಹಣಕಾಸು ಅಧಿಕಾರಿ ಪ್ರೊ.ಆರ್.ಶಶಿಧರ, ರಾಜ್ಯ ಪದವಿ ಕಾಲೇಜು ಅಧ್ಯಾಪಕರ ಸಂಘದ ಮಾಜಿ ಅಧ್ಯಕ್ಷ ಪ್ರೊ.ಮುರುಗೇಂದ್ರಪ್ಪ, ಶಾಸಕ ಯು.ಬಿ.ಬಣಕಾರ, ಮಾಜಿ ಸಚಿವ ಬಿ.ಸಿ.ಪಾಟೀಲ, ಅಖಿಲ ಭಾರತ ವೀರಶೈವ ಮಹಾಸಭಾ ಪ್ರಧಾನ ಕಾರ್ಯದರ್ಶಿ ರೇಣುಕಪ್ರಸನ್ನ ಸಂತಾಪ ಸೂಚಿಸಿದ್ದಾರೆ.

ಶಾಸಕ ಬಿ.ಪಿ. ಹರೀಶ್ ಬಂಧನ ವಾರಂಟ್ ರದ್ದು

ಜಾತಿನಿಂದನೆ ಕೇಸಲ್ಲಿ ಕೋರ್ಟ್‌ಗೆ ಹಾಜರಾದ ಹರಿಹರ ಶಾಸಕ

• **ಕನ್ನಡಪ್ರಭ ವಾರ್ತೆ** ಹರಿಹರ

ಜಾತಿನಿಂದನೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹರಿಹರ ಕ್ಷೇತ್ರದ ಶಾಸಕ ಬಿ.ಪಿ.ಹರೀಶ್ ಗುರುವಾರ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಖುದ್ದು ಹಾಜರಾಗಿದ್ದು, ಅವರ ವಿರುದ್ಧ ಜಾರಿಯಾಗಿದ್ದ ಜಾಮೀನು ರಹಿತ ಬಂಧನ ವಾರಂಟ್ ರದ್ದಾಗಿದೆ.



ಶಾಸಕರ ಪರ ವಕೀಲರು ವಾರಂಟ್ ಹಿಂಪಡೆಯುವಂತೆ ಮನವಿ ಮಾಡಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಾಲಯ, ಬೆಂಗಳೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ 1,000 ರು. ದಂಡ ಪಾವತಿಸುವ ಷರತ್ತಿನ ಮೇರೆಗೆ ಬಂಧನ ವಾರಂಟ್ ಅನ್ನು ರದ್ದುಗೊಳಿಸಿ ಆದೇಶಿಸಿದೆ.

ಹೈಕೋರ್ಟ್ ಆದೇಶ ಮತ್ತು ವಿಚಾರಣೆ ಮುಂದೂಡಿಕೆ: ಈ ಹಿಂದೆ ದಾವಣಗೆರೆಯ ವಿಶೇಷ ನ್ಯಾಯಾಲಯವು ಸೂಕ್ತ ಕಾರಣಗಳನ್ನು ನೀಡದೆ ಪ್ರಕರಣದ ಕಾಗ್ನಿಸೆನ್ಸ್ ತೆಗೆದುಕೊಂಡು ಶಾಸಕರಿಗೆ ಸಮನ್ಸ್ ಜಾರಿ ಮಾಡಿದ್ದನ್ನು ಪ್ರಶ್ನಿಸಿ ಶಾಸಕರು ಹೈಕೋರ್ಟ್ ಮೊರೆ ಹೋಗಿದ್ದರು. ವಿಚಾರಣೆ ನಡೆಸಿದ್ದ ಹೈಕೋರ್ಟ್, ದಾವಣಗೆರೆ ಕೋರ್ಟ್ ಹೊರಡಿಸಿದ್ದ ಸಮನ್ಸ್ ಅನ್ನು ರದ್ದುಪಡಿಸಿತ್ತು. ಅಲ್ಲದೆ, ಪ್ರಕರಣದ ದಾಖಲೆಗಳನ್ನು ಮರುಪರಿಶೀಲಿಸಿ, ಹೊಸದಾಗಿ ಸಕಾರಣದ ಆದೇಶ ಹೊರಡಿಸುವಂತೆ ಸೂಚಿಸಿ ಪ್ರಕರಣವನ್ನು ಕೆಳಹಂತದ ನ್ಯಾಯಾಲಯಕ್ಕೆ ಮರಳಿಸಿತ್ತು.

ಗುರುವಾರ ವಿಚಾರಣೆ ವೇಳೆ ಹೈಕೋರ್ಟ್ ಆದೇಶವನ್ನು ಉಲ್ಲೇಖಿಸಿದ ನ್ಯಾಯಾಲಯವು, ಪ್ರಕರಣದ ಕಾಗ್ನಿಸೆನ್ಸ್ ತೆಗೆದುಕೊಳ್ಳುವ ವಿಚಾರವಾಗಿ ಸಕಾರಣದ ಆದೇಶ ಹೊರಡಿಸುವ ಕುರಿತು ವಾದ ಮಂಡಿಸಲು ಸರ್ಕಾರಿ ಅಭಿಯೋಜಕರು ಕಾಲಾವಕಾಶ ಕೋರಿದ್ದರಿಂದ ಮುಂದಿನ ವಿಚಾರಣೆಯನ್ನು ಮೇ 27ಕ್ಕೆ ಮುಂದೂಡಿದೆ.

2023ರ ಮೇ 16ರಂದು ಶಾಸಕರಾಗಿ ಆಯ್ಕೆಯಾಗಿದ್ದ ಹರೀಶ್ ಅವರನ್ನು ಅಭಿನಂದಿಸಲು ಬಂದಿದ್ದ ಪರಿಶಿಷ್ಟ ಜಾತಿಯ ಜನರಿಗೆ ಜಾತಿ ನಿಂಧನೆ ಮಾಡಿದ್ದರೆಂಬ ಆರೋಪದ ಮೇಲೆ ಶಾಸಕರ ವಿರುದ್ಧ ಎಸ್ಸಿ/ಎಸ್ಟಿ ದೌರ್ಜನ್ಯ ತಡೆ ಕಾಯ್ದೆ ಹಾಗೂ ಐಪಿಸಿ ಕಲಂ 504ರಅಡಿಹರಿಹರನಗರಠಾಣೆಯಲ್ಲಿಪ್ರಕರಣದಾಖಲಾಗಿತ್ತು. ಇದೇ ಪ್ರಕರಣದಲ್ಲಿ ವಿಚಾರಣೆಗೆ ಗೈರಾಗಿದ್ದರಿಂದ ಮೇ 4ರಂದು ಶಾಸಕರಿಗೆ ಬಂಧನ ವಾರಂಟ್ ಜಾರಿಯಾಗಿತ್ತು.

ಪಾಲಿಕೆ ಕಚೇರಿ ಮೇಲೆ ಲೋಕಾ ದಾಳಿ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ಸಾರ್ವಜನಿಕರ ಕೆಲಸ ಮಾಡಿಕೊಡಲು ಸಾರ್ವಜನಿಕರಿಂದ ಲಂಚಕ್ಕೆ ಬೇಡಿಕೆ ಇಡುತ್ತಿದ್ದಾರೆ ಎಂಬ ದೂರಿನ ಹಿನ್ನೆಲೆಯಲ್ಲಿ ಇಲ್ಲಿನ ರಾಜೀವ್ ಗಾಂಧಿ ಬಡಾವಣೆಯಲ್ಲಿರುವ ಮಹಾನಗರ ಪಾಲಿಕೆಯ ವಲಯ ಕಚೇರಿ-1ರ ಮೇಲೆ ಲೋಕಾಯುಕ್ತ ಅಧಿಕಾರಿಗಳು ಗುರುವಾರ ದಾಳಿ ನಡೆಸಿದ್ದಾರೆ.

ಪಾಲಿಕೆಯ ಈ ವಲಯ ಕಚೇರಿಯಲ್ಲಿ 'ಈ-ಸ್ವತ್ತು' ಸೇರಿದಂತೆ ವಿವಿಧ ನಾಗರಿಕ ಸೇವೆಗಳನ್ನು ಒದಗಿಸಲು ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರಿಂದ ಅಧಿಕ ಹಣ ವಸೂಲಿ ಮಾಡುತ್ತಿದ್ದಾರೆ ಎನ್ನುವ ವ್ಯಾಪಕ ದೂರುಗಳು ಕೇಳಿ ಬಂದಿದ್ದವು. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಡಿವೈಎಸ್ಪಿ ಕಲಾವತಿ ಹಾಗೂ ಸಿಪಿಐ ಗುರುಬಸವರಾಜ್ ನೇತೃತ್ವದ ಎಂಟು ಅಧಿಕಾರಿಗಳ ತಂಡ ಏಕಾಏಕಿ ಕಚೇರಿಗೆ ಭೇಟಿ ನೀಡಿ ದಾಖಲೆಗಳ ಪರಿಶೀಲನೆ ನಡೆಸಿತು.

ಎರಡು ಗಂಟೆಗೂ ಹೆಚ್ಚು ಕಾಲ ಕಚೇರಿಯ ಪ್ರತಿಯೊಬ್ಬ ಸಿಬ್ಬಂದಿಯನ್ನೂ ವಿಚಾರಣೆಗೆ ಒಳಪಡಿಸಿದ ಅಧಿಕಾರಿಗಳು, ಅವರ ಬ್ಯಾಂಕ್ ಖಾತೆಗಳ ವಹಿವಾಟನ್ನು ಪರಿಶೀಲಿಸಿದರು. ಈ ವೇಳೆ ಸಿಬ್ಬಂದಿಯೊಬ್ಬರ ಖಾತೆಯಲ್ಲಿ ಸಂಬಳಕ್ಕಿಂತ ಹೆಚ್ಚಿನ ಮೊತ್ತದ ವಹಿವಾಟು ನಡೆದಿರುವುದು ಕಂಡುಬಂದಿದೆ.

ದಾಳಿಯವೇಳೆಕಚೇರಿಯಲ್ಲಿದ್ದಕಡತಗಳನ್ನುವಶಪಡಿಸಿಕೊಂಡಿರುವ ಲೋಕಾಯುಕ್ತ ತಂಡ, ಅಕ್ರಮವಾಗಿ ಸಂಗ್ರಹಿಸಿಡಲಾಗಿದ್ದ ಹಣ ಅಥವಾ ದಾಖಲೆಗಳಿಗಾಗಿ ಸಂಜೆಯವರೆಗೂ ಶೋಧ ನಡೆಯಿತು.

ಪಾಲಿಕೆ ಕಚೇರೀಲಿ ಲೋಕಾ ಶೋಧ: ದಾವಣಗೆರೆ ಮಹಾನಗರ ಪಾಲಿಕೆಯ ವಲಯ ಕಚೇರಿ-1 ಮೇಲೆ ಲೋಕಾಯುಕ್ತ ಅಧಿಕಾರಿಗಳು ದಿಢೀರ್‌ದಾಳಿ ನಡೆಸಿದ್ದಾರೆ. ಇಸ್ವತ್ತು ಮತ್ತು ಖಾತೆ ಬದಲಾವಣೆಗೆ ಲಂಚಪಡೆಯಲಾಗುತ್ತಿದೆಎಂಬಸಾರ್ವಜನಿಕರದೂರಿನಹಿನ್ನೆಲೆಯಲ್ಲಿ ಈ ದಾಳಿ ನಡೆದಿದ್ದು, ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

2.5 ಲಕ್ಷ ಹಣದ ಸಮೇತ ಲೋಕಾ ಬಲೆಗೆ ಗ್ರಾಮ ಲೆಕ್ಕಾಧಿಕಾರಿ!

ದಾಳಿಯ ವೇಳೆ ಕಚೇರಿಯಲ್ಲಿನ ದಾಖಲೆಗಳು, ಅರ್ಜಿಗಳ ಪ್ರಕ್ರಿಯೆ ಹಾಗೂ ಹಣಕಾಸು ವ್ಯವಹಾರಗಳ ಕುರಿತು ಅಧಿಕಾರಿಗಳು ಮಾಹಿತಿ ಸಂಗ್ರಹಿಸುತ್ತಿದ್ದು, ಯಾವುದೇ ಅಕ್ರಮ ಸಾಬೀತಾದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ. ಪ್ರಸ್ತುತ ಪರಿಶೀಲನೆ ಮುಂದು ವರಿದಿದ್ದು, ದಾಳಿಯ ಪೂರ್ಣ ವರದಿ ನಂತರ ಹೆಚ್ಚಿನ ಮಾಹಿತಿ ಹೊರಬರುವ ನಿರೀಕ್ಷೆಯಿದೆ. ಈ ಘಟನೆ ಮಹಾನಗರ ಪಾಲಿಕೆಯ ಕಾರ್ಯ ವೈಖರಿಯ ಬಗ್ಗೆ ಸಾರ್ವಜನಿಕರಲ್ಲಿ ಮತ್ತೆ ಚರ್ಚೆಗೆ ಕಾರಣವಾಗಿದ್ದು, ಪಾರದರ್ಶಕತೆಗೆ ಒತ್ತಾಯ

8ಕ್ಕೂ ಹೆಚ್ಚು ಅಧಿಕಾರಿಗಳ ದಾಳಿ: ನಗರದ ರಾಜೀವ್ ಗಾಂಧಿ ಬಡಾವಣೆಯಲ್ಲಿ ಇರುವ ಮಹಾನಗರ ಪಾಲಿಕೆ ವಲಯ ಕಚೇರಿ-1 ಮೇಲೆ ಲೋಕಾಯುಕ್ತ ತಂಡ ದಾಳಿ ನಡೆಸಿದ್ದು, ಸುಮಾರು ಎಂಟುಕ್ಕೂ ಹೆಚ್ಚು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಕಳೆದ ಎರಡು ಗಂಟೆಗಳಿಗಿಂತ ಹೆಚ್ಚು ಕಾಲದಿಂದ ದಾಖಲೆಗಳು ಮತ್ತು ಕಚೇರಿ ಕಾರ್ಯ ಪದ್ಧತಿಯ ಕುರಿತು ತೀವ್ರ ಪರಿಶೀಲನೆ ಮುಂದುವರಿದಿದೆ.

ಸಾರ್ವಜನಿಕರಿಂದ ಬಂದ ದೂರಿನಲ್ಲಿ, ಇಸ್ವತ್ತು ಪ್ರಮಾಣಪತ್ರ ಹಾಗೂ ಖಾತೆ ಬದಲಾವಣೆ ಪ್ರಕ್ರಿಯೆಗೆ ಸಿಬ್ಬಂದಿ ಅನಧಿಕೃತವಾಗಿ ಹಣ ಬೇಡಿಕೆಇಡುತ್ತಿದ್ದಾರೆಎಂಬ ಆರೋಪಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಅಚ್ಚರಿ ದಾಳಿ ನಡೆಸಿ, ಸಂಬಂಧಿಸಿದ ದಾಖಲೆ ಪರಿಶೀಲಿಸುತ್ತಿದ್ದಾರೆ.

ಕೃಷಿ ಪರಿಕರಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಿ

ಕೃಷಿ ಇಲಾಖೆ ವಿಶ್ವನಾಥ್ ಸೂಚನೆ | ಕೃಷಿ ಪರಿಕರ ವಿತರಣೆ ಕುರಿತು ತರಬೇತಿ

• **ಕನ್ನಡಪ್ರಭ ವಾರ್ತೆ** ಹೊನ್ನಾಳಿ



ಹೊನ್ನಾಳಿಯ ಕೃಷಿ ಇಲಾಖೆಯಲ್ಲಿ ಕೃಷಿ ಪರಿಕರ ದಾಸ್ತಾನು ವಿತರಣೆ ಕುರಿತು ತರಬೇತಿ, ಕೀಟನಾಶಕ ಬಳಕೆ ಕಾರ್ಯಕ್ರಮವನ್ನು ಕೃಷಿ ಸಹಾಯಕ ನಿರ್ದೇಶಕ ವಿಶ್ವನಾಥ್ ಉದ್ಘಾಟಿಸಿದರು,

ಕೃಷಿ ಪರಿಕರಗಳಲ್ಲಿ ಉತ್ತಮ ಗುಣಮಟ್ಟ ಕಾಯ್ದುಕೊಳ್ಳಬೇಕು. ಕೃಷಿ ಪರಿಕರಗಳನ್ನು ಸರಿಯಾದ ಕ್ರಮದಲ್ಲಿ ಅಗತ್ಯ ದಾಖಲಾತಿ ನಿರ್ವಹಣೆ ಮಾಡಿ, ಎಚ್ಚರಿಕೆಯಿಂದ ವ್ಯವಹಾರ ಮಾಡಬೇಕು, ಒಂದು ವೇಳೆ ಸರಿಯಾದ ದಾಖಲೆಗಳನ್ನು ನಿರ್ವಹಿಸದೇ, ಕಾನೂನುಬಾಹಿರವಾಗಿ ರಸಗೊಬ್ಬರ ಮತ್ತು ಬಿತ್ತನೆ ಬೀಜಗಳನ್ನು ಮಾರಾಟ ಮಾಡಿದರೆ ಅಂತಹ ಮಾರಾಟಗಾರರ ವಿರುದ್ದ ಕಾನೂನು ಕ್ರಮ ಕೈಗೊಂಡು ಲೈಸನ್ಸ್ ರದ್ದುಪಡಿಸಲಾಗುವುದು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ವಿಶ್ವನಾಥ್ ಹೇಳಿದರು.

ಪಟ್ಟಣದ ಕೃಷಿ ಇಲಾಖೆಯಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ಕೃಷಿ ಪರಿಕರ ದಾಸ್ತಾನು ವಿತರಣೆ ಕುರಿತು ತರಬೇತಿ ಹಾಗೂ ಸುರಕ್ಷಿತ ಕೀಟ ನಾಶ ಬಳಕೆ -ಬೀಜೋಪಚಾರ ಆಂದೋಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು,

ಉತ್ತಮ ಗುಣಮಟ್ಟದ ಬಿತ್ತನೆ ಬೀಜ, ಕೀಟನಾಶಕ ಮತ್ತು ರಸಗೊಬ್ಬರಗಳನ್ನು ಹೊನ್ನಾಳಿ, ನ್ಯಾಮತಿ ತಾಲ್ಲೂಕಿನ ರೈತರಿಗೆ ಮಾತ್ರ ನಿಗದಿತ ಬೆಲೆಯಲ್ಲಿ ಸಕಾಲಕ್ಕೆ ನಿಡಬೇಕೆಂದುಮತ್ತುಕಾಂಪ್ಲೆಕ್ಷ್‌ರಸಗೊಬ್ಬರಗಳ ಬಳಕೆ,ಯೂರಿಯ ರಸಗೊಬ್ಬರದ ಬಳಕೆಯ ಮಹತ್ವ ರೈತರಿಗೆ ತಿಳಿಸಲು ಎಲ್ಲಾ ಕೃಷಿ ಪರಿಕರ ಮಾರಾಟಗಾರರಿಗೆ ಸೂಚಿಸಿದರು.

ಕೃಷಿ ಇಲಾಖೆಯ ಜಾಗೃತದಳದ ಸಹಾಯಕ ಕೃಷಿ ನಿರ್ದೇಶಕರುಗಳಾದ ಶ್ರೀನಿವಾಸಲು ಮತ್ತು ಗೋರ್ವಧನ್ ಅವರು ಮಾತನಾಡಿ, ತಾಲ್ಲೂಕಿನ ಎಲ್ಲಾ ಕೃಷಿ ಪರಿಕರ ಮಾರಾಟಗಾರರಿಗೆ ಬಿತ್ತನೆ ಬೀಜ, ಕೀಟನಾಶಕ ಮತ್ತು ರಸಗೊಬ್ಬರ ಕಾಯ್ದೆಗಳ ಮತ್ತು ಕಾನೂನಿನ ಬಗ್ಗೆ ಅರಿವು ಮೂಡಿಸುವ ಉಪನ್ಯಾಸ ನೀಡಿದರು.

ಕೆ-ಕಿಸಾನ್ ತಂತ್ರಾಂಶದ ಮೂಲಕ ಜಮೀನು ಹೊಂದಿರುವ ಅರ್ಹ ರೈತರಿಗೆ ಮಾತ್ರ ರಸಗೊಬ್ಬರ ವಿತರಣೆ ನಡೆಯಲಿದೆ, ರೈತರು ರಸಗೊಬ್ಬರ ಖರೀದಿಸಲು ಎಫ್ ಐ ಡಿ ಕಡ್ಡಾಯ ಮಾಡಲಾಗಿದ್ದು, ರೈತರ ಎಫ್ ಐ ಡಿ ಸಂಖ್ಯೆ ಜೋಡಿಸಲಾದ ಪ್ರತಿಯೊಂದು ಜಮೀನಿನ ವಿಸ್ತೀರ್ಣ ಆಧಾರದ ಮೇಲೆ ಅಗತ್ಯ ಪ್ರಮಾಣದಷ್ಟೆ ಗೊಬ್ಬರ ನೀಡುವ ವ್ಯವಸ್ಥೆ ಮಾಡಲಾಗಿದೆ. ಜಮೀನಿಗೆ ಎಷ್ಟು ಅವಶ್ಯಕತೆ ಇದೆಯೋ ಅಷ್ಟೆ ಗೊಬ್ಬರ ಬಳಕೆ ಮಾಡಬೇಕೆಂದು ಸೂಚಿಸಿದರು.

ಕೃಷಿ ಅಧಿಕಾರಿಯಾದ ಗಿರೀಶ್ ಎ ಜಿ., ಹೊನ್ನಾಳಿ, ನ್ಯಾಮತಿ ತಾಲೂಕಿನ ಕೃಷಿ ಪರಿಕರ ಮಾರಟಗಾರರ ಸಂಘದ ಅಧ್ಯಕ್ಷರಾದ ಪುಟ್ಟಣ್ಣ, ವಾಗೀಶ್, ಹೊನ್ನಾಳಿ ನ್ಯಾಮತಿ ತಾಲೂಕಿನ ಕೃಷಿ ಅಧಿಕಾರಿಗಳು, ಸಿಬ್ಬಂದಿ, ಎಲ್ಲಾ ರಸಗೊಬ್ಬರ ಮಾರಾಟಗಾರರು ಭಾಗವಹಿಸಿದ್ದರು.



ಬಿ.ಎಸ್.ಯಡಿಯೂರಪ್ಪ ಅಭಿನೋತ್ಸವ ಬಗ್ಗೆ ಜಾಗೃತಿಗೆ ಹರಿಹರದ ಬಿಜೆಪಿ ಕಾರ್ಯಾಲಯದಲ್ಲಿ ಪ್ರಚಾರ ಪರಿಕರಗಳನ್ನು ಜಿಲ್ಲಾ ಮಾಜಿ ಅಧ್ಯಕ್ಷ ಹನಗವಾಡಿ ವೀರೇಶ್ ಬಿಡುಗಡೆಗೊಳಿಸಿದರು. ಬಾತಿ ಚಂದ್ರಶೇಖರ, ತುಳಜಪ್ಪ ಭೂತೆ ಇತರರು ಇದ್ದರು.